ಸಂಪುಟ: 02/ ಸಂಚಿಕೆ: ೧೮೬/ ಶನಿವಾರ ದಿನಾಂಕ : ೧೩-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ಧಾರವಾಡ ಬಾಗಲಕೋಟ ವಿಜಯಪುರ ಗದಗ ಕೊಪ್ಪಳ ಹಾವೇರಿ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 186/ SATURDAY Date : 13-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

ಕಳಚಿದ ಚಕ್ರ; ವಿಮಾನ ತುರ್ತು ಲ್ಯಾಂಡಿಂಗ್

ಮುಂಬೈ: ಕಾಂಡ್ಲಾ ವಿಮಾನ ನಿಲ್ದಾಣದಿಂದ ಟೇಕ್ ಆಫ್ ಆದ ನಂತರ ಸ್ಪೈಸ್‌ಜೆಟ್ ವಿಮಾನದ ಚಕ್ರ ಕಳಚಿ ಬಿದ್ದಿದ್ದು, ವಿಮಾನ ಮುಂಬೈ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ ಮಾಡಿದೆ ಎಂದು ಮೂಲಗಳು ತಿಳಿಸಿವೆ. ಸೆಪ್ಟೆಂಬರ್ 12 ರಂದು, ಕಾಂಡ್ಲಾದಿಂದ ಮುಂಬೈಗೆ ಪ್ರಯಾಣಿಸುತ್ತಿದ್ದ ಸ್ಪೈಸ್‌ಜೆಟ್ ಕ್ಯೂ400 ವಿಮಾನದ ಹೊರ ಚಕ್ರವು ಟೇಕ್ ಆಫ್ ಆದ ನಂತರ ರನ್‌ವೇಯಲ್ಲಿ ಕಳಚಿ ಬಿದ್ದಿರುವುದು ಕಂಡುಬಂದಿದೆ. ಆದರೂ ವಿಮಾನ ಮುಂಬೈಗೆ ತನ್ನ ಪ್ರಯಾಣವನ್ನು ಮುಂದುವರೆಸಿತು ಮತ್ತು ಸುರಕ್ಷಿತವಾಗಿ ಲ್ಯಾಂಡ್ ಆಗಿದೆ" ಎಂದು ವಿಮಾನಯಾನ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ. ಸುರಕ್ಷಿತ ಲ್ಯಾಂಡಿಂಗ್ ನಂತರ, ವಿಮಾನವು ತನ್ನದೇ ಆದ ಶಕ್ತಿಯಿಂದ ಟರ್ಮಿನಲ್‌ಗೆ ಆಗಮಿಸಿತು ಮತ್ತು ಎಲ್ಲಾ ಪ್ರಯಾಣಿಕರು ಸುರಕ್ಷಿತವಾಗಿ ಇಳಿದರು ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ.

ಗೃಹಿಣಿಯರ ಕೊಡುಗೆಯನ್ನು ಗುರುತಿಸುವ ಕಾಲ ಬಂದಿದೆ

ಹೊಸದಿಲ್ಲಿ: ಗೃಹಿಣಿಯರ ಕೊಡುಗೆಯನ್ನು ಗುರುತಿಸುವಲ್ಲಿ ಶಾಸನಾತ್ಮಕ ವ್ಯವಸ್ಥೆಯ ಗೈರನ್ನು ಒತ್ತಿ ಹೇಳಿದ ದಿಲ್ಲಿ ಹೈಕೋರ್ಟ್, "ಗೃಹಿಣಿಯರ ಕೊಡುಗೆಯನ್ನು ಗುರುತಿಸುವ ಕಾಲ ಬಂದಿದ್ದು, ಆಸ್ತಿಗಳ ಮಾಲಕತ್ವ ಹಕ್ಕಿನ ವಿಚಾರಕ್ಕೆ ಬಂದಾಗ ಗೃಹಿಣಿಯರ ಕೊಡುಗೆಯನ್ನು ಬಚ್ಚಿಡಲಾಗಿದೆ ಅಥವಾ ಉಪೇಕ್ಷಿಸಲಾಗಿದೆ" ಎಂದು ಅಭಿಪ್ರಾಯಪಟ್ಟಿದೆ.

ಆಸ್ತಿಯಲ್ಲಿ ತನಗೂ ಸಮಾನ ಹಕ್ಕಿದೆ ಎಂಬ ಅರ್ಜಿಯನ್ನು ವಜಾಗೊಳಿಸಿದ ಕೌಟುಂಬಿಕ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಮಹಿಳೆಯೊಬ್ಬರು ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯ ವಿಚಾರಣೆಯನ್ನು ಗುರುವಾರ ನಡೆಸಿದ ನ್ಯಾ. ಅನಿಲ್ ಕ್ಷೇತ್ರಪಾಲ್ ಹಾಗೂ ನ್ಯಾ. ಹರೀಶ್ ವೈದ್ಯನಾಥನ್ ಶಂಕರ್ ಅವರನ್ನೊಳಗೊಂಡ ನ್ಯಾಯಪೀಠ ಮೇಲಿನಂತೆ ಅಭಿಪ್ರಾಯಪಟ್ಟಿತು. "ಗೃಹಿಣಿಯರ ಕೊಡುಗೆಯನ್ನು ಬಚ್ಚಿಡಲಾಗಿರುವುದರಿಂದ ಅಥವಾ ಉಪೇಕ್ಷಿಸಲಾಗಿರುವುದರಿಂದ, ಗೃಹಿಣಿಯರ ಕೊಡುಗೆಯನ್ನು ಗುರುತಿಸುವ ಕಾಲ ಬಂದಿದೆ ಎಂಬ ಅರ್ಥಪೂರ್ಣ ನಿಲುವಿಗೆ ತಲುಪಬೇಕಾದ ಸಮಯ ಬಂದಿದೆ ಎಂಬುದು ನಮ್ಮ ಅಭಿಪ್ರಾಯವಾಗಿದೆ. ಆದರೆ, ಸದ್ಯ ಗೃಹಿಣಿಯರ ಕೊಡುಗೆಯನ್ನು ಮೌಲ್ಯಮಾಪನ ಮಾಡುವಂತಹ ಯಾವುದೇ ಶಾಸನಾತ್ಮಕ ನೆಲೆ ಇಲ್ಲದಿರುವುದನ್ನೂ ನಾವು ಪರಿಗಣಿಸುತ್ತೇವೆ" ಎಂದು ನ್ಯಾಯಪೀಠ ಅಭಿಪ್ರಾಯ ಪಟ್ಟಿತು.

ಮಹಿಳೆಯ ಅರ್ಜಿಯನ್ನು ವಜಾಗೊಳಿಸಿದ ಕೌಟುಂಬಿಕ ನ್ಯಾಯಾಲಯದ ತೀರ್ಪನ್ನು ದಿಲ್ಲಿ ಹೈಕೋರ್ಟ್ ಎತ್ತಿ ಹಿಡಿದರೂ, ಗೃಹಿಣಿಯರ ಕೊಡುಗೆಯನ್ನು ಅರ್ಥಪೂರ್ಣವಾಗಿ ಗುರುತಿಸುವ ಶಾಸನಾತ್ಮಕ ಕ್ರಮಗಳನ್ನು ಜಾರಿಗೊಳಿಸಬೇಕಾದ ಸಮಯ ಇದಾಗಿದೆ ಎಂದೂ ಹೇಳಿತು.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ೬೦ ಪ್ರಶ್ನೆಗಳ ಗುಚ್ಛ

ಆಧಾರ್‌ಗೆ ಮೊಬೈಲ್ ನಂ. ಲಿಂಕ್ ಮಾಡಿ ಸಮೀಕ್ಷೆ

ಬೆಂಗಳೂರು: ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಸೆ.22 ರಿಂದ ಅ.7ರವರೆಗೆ ನಡೆಯಲಿದ್ದು, ವೈಜ್ಞಾನಿಕವಾಗಿ ಜಾಗ್ರತೆಯಿಂದ ಸಮೀಕ್ಷೆ ನಡೆಸಲು ತಿಳಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಸೆಪ್ಟೆಂಬರ್ 22, 2025 ರಿಂದ ಅಕ್ಟೋಬರ್ 7ರೊಳಗೆ ಸಮೀಕ್ಷೆ ಮುಗಿಸಲು ತೀರ್ಮಾನಿಸಲಾಗಿದ್ದು, ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ಡಿಸೆಂಬರ್ ಒಳಗಡೆ ವರದಿ ಕೊಡುವುದಾಗಿ ಹೇಳಿದೆ ಎಂದು ತಿಳಿಸಿದರು.

ಈ ಸಮೀಕ್ಷೆಯ ಅವಧಿಯಲ್ಲಿ ದಸರಾ ರಜೆ ಇದೆ. ಟೀಚರ್ಸ್‌ಗಳನ್ನು ಉಪಯೋಗಿಸಿ ಸಮೀಕ್ಷೆ ನಡೆಸಲಾಗುವುದು. 1,75,000 ಸರ್ಕಾರಿ ಶಾಲಾ ಶಿಕ್ಷಕರುಗಳನ್ನು ವಿಶೇಷ ಭತ್ಯೆ ನೀಡಿ ಸಮೀಕ್ಷೆಯಲ್ಲಿ ತೊಡಗಿಸಿಕೊಳ್ಳುತ್ತಿದ್ದೇವೆ. ಮಧುಸೂದನ್ ಅವರ ಸಮಿತಿ ಮತ್ತು ಹಿಂದುಳಿದ ವರ್ಗಗಳ ಆಯೋಗ ವೈಜ್ಞಾನಿಕ ಮಾನದಂಡದಲ್ಲಿ ಸಮೀಕ್ಷೆ ನಡೆಸಿ ಡಿಸೆಂಬರ್ ಒಳಗೆ ವರದಿ ನೀಡಲಿದ್ದಾರೆ ಎಂದರು.

ಎಲ್ಲ ಜಾತಿ–ಧರ್ಮದವರ ದತ್ತಾಂಶ ಅಂಗೈಯಲ್ಲಿದ್ದರೆ ಮಾತ್ರ ಸಾಮಾಜಿಕ ನ್ಯಾಯದ ವಿಶೇಷ ಕಾರ್ಯಕ್ರಮಗಳನ್ನು ರೂಪಿಸಲು ಸಾಧ್ಯ. ಅಮೆರಿಕದಲ್ಲೂ ಕೆರಿಯರ್‌ಗೆ affirmative action

ಅಂತ ಇದೆ, ನಮ್ಮಲ್ಲಿ ಮೀಸಲಾತಿ ಇದೆ. ಹೊಸದಾಗಿ 7 ಕೋಟಿ ಜನರ ಸಾಮಾಜಿಕ, ಶೈಕ್ಷಣಿಕ ಸ್ಥಿತಿ ಗತಿ ಅರಿಯಲು ಈ ಸಮೀಕ್ಷೆ ನಡೆಸಲಾಗುತ್ತಿದೆ. ಆದಷ್ಟೂ ಜಾಗ್ರತೆಯಿಂದ ಸಮೀಕ್ಷೆ ನಡೆಸಿ ವರದಿ ಕೊಡಲು ಸೂಚನೆ ನೀಡಿದ್ದೇವೆ. ಸದ್ಯ 1574 ಜಾತಿಗಳು ಇವೆ. ಒಟ್ಟು 60 ಪ್ರಶ್ನೆಗಳನ್ನು ಸಿದ್ಧಪಡಿಸಲಾಗಿದ್ದು, ಈ ಪ್ರಶ್ನೆಗಳಿಗೆ ಉತ್ತರಿಸಬೇಕು ಎಂದು ಹೇಳಿದರು.

ಸದ್ಯ 425 ಕೋಟಿ ರೂ. ನೀಡಲಾಗುವುದು: ಗಣತಿದಾರರಿಗೆ ವಿಶೇಷ ಭತ್ಯೆ ನೀಡಲಾಗುತ್ತದೆ. ಗಣತಿದಾರರಿಗೆ 20,000 ರೂ. ವರೆಗೆ ಭತ್ಯೆ ನೀಡಲಾಗುತ್ತದೆ. ಬೆಸ್ಕಾಂ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತರಿಗೆ ತಲಾ 2,000 ರೂ. ಗೌರವಧನ ಕೊಡಲಾಗುತ್ತದೆ. 325 ಕೋಟಿಯಷ್ಟು ಭತ್ಯೆ ವೆಚ್ಚ ಬೀಳಲಿದೆ. 423 ಕೋಟಿ ರೂ. ಸದ್ಯಕ್ಕೆ ಕೊಡುವುದಾಗಿ ಹೇಳಿದ್ದೇವೆ. ಇನ್ನೂ ಅಗತ್ಯ ಬಿದ್ದರೆ ಹೆಚ್ಚಿನ ಹಣ ಕೊಡಲಾಗುತ್ತದೆ ಎಂದರು.

ಆಧಾರ್ ನಂ.ಗೆ ಮೊಬೈಲ್‌ಗೆ ಲಿಂಕ್ ಮಾಡಿ ಸಮೀಕ್ಷೆ: ಆರ್ ಆರ್ ನಂ. ಮೂಲಕ ಎಸ್ಕಾಂ ಸಿಬ್ಬಂದಿ ಮನೆ ಮನೆಗೆ ಜಿಯೋ ಟ್ಯಾಗ್ ಮಾಡುತ್ತಾರೆ. ಅವರು ಮನೆಗಳಿಗೆ ಯುಹೆಚ್‌ಐಡಿ ನಂ. ಇರುವ ಸ್ಟಿಕ್ಕರ್ ಕೊಡುತ್ತಾರೆ. ಸುಮಾರು 2 ಕೋಟಿ ಮನೆಗಳಿಗೆ ಇದನ್ನು ಅಂಟಿಸಲಾಗುತ್ತದೆ. ಈವರೆಗೆ 1.55 ಕೋಟಿ ಮನೆಗಳಿಗೆ ಈ ಸ್ಟಿಕ್ಕರ್ ಅಂಟಿಸಲಾಗಿದೆ. ಬಳಿಕ ಮನೆ ಮನೆಗೆ ಗಣತಿದಾರರು ಬಂದು ಸರ್ವೆ ಮಾಡುತ್ತಾರೆ. ಅವರು ಆಧಾರ್ ನಂಬರ್ ಹಾಗೂ ಪಡಿತರ ಚೀಟಿ ನಂಬರ್ ಅನ್ನು ಮೊಬೈಲ್‌ಗೆ ಲಿಂಕ್ ಮಾಡುತ್ತಾರೆ. ಮೊಬೈಲ್ ಇಲ್ಲದೇ ಹೋದರೆ ಅಲ್ಲೂ ಸರ್ವೆ ಮಾಡಲಾಗುವುದು ಎಂದು ತಿಳಿಸಿದರು.

ಸರ್ವೆಯನ್ನು ವೈಜ್ಞಾನಿಕವಾಗಿ ಮಾಡಬೇಕು. ಎಲ್ಲರೂ ಇದರಲ್ಲಿ ಪಾಲ್ಗೊಳ್ಳಬೇಕು. 60 ಪ್ರಶ್ನಾವಳಿ ಇದೆ. ಈ ಎಲ್ಲ 60 ಪ್ರಶ್ನೆಗಳಿಗೆ ಉತ್ತರ ಕೊಡಬೇಕು. ಇದರಲ್ಲಿ ಯಾರೂ ತಪ್ಪಿಸಿಕೊಳ್ಳಬಾರದು. ಮನೆಯಲ್ಲಿ ಇಲ್ಲವಾದರೆ ಆಯೋಗದ ಸಹಾಯವಾಣಿ 8050770004 ಕರೆ ಮಾಡಿ ಮಾಹಿತಿ ನೀಡಬಹುದು. ರಾಜ್ಯದ ಜನತೆ ಒಬ್ಬರೂ ತಪ್ಪಿಸಿಕೊಳ್ಳದೇ ಕಡ್ಡಾಯವಾಗಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕು ಎಂದು ಸಿಎಂ ವಿನಂತಿಸಿದರು.

ಹೇಮಾವತಿ ಲಿಂಕ್ ಕೆನಾಲ್

ಯಾರಿಗೂ ಅನ್ಯಾಯವಾಗದಂತೆ ನೋಡಿಕೊಳ್ಳುತ್ತೇವೆ: ಡಿಕೆಶಿ

ಬೆಂಗಳೂರು: ಹೇಮಾವತಿ ಲಿಂಕ್ ಕೆನಾಲ್ ಯೋಜನೆ ಕಾಮಗಾರಿ ಸ್ಥಳ ಪರಿಶೀಲನೆ ಮಾಡಿದ್ದು, ಅಧಿಕಾರಿಗಳ ಜೊತೆ ಚರ್ಚೆ ಮಾಡಿ ಯಾರಿಗೂ ಅನ್ಯಾಯವಾಗದಂತೆ ನೋಡಿಕೊಳ್ಳುತ್ತೇವೆ' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಭರವಸೆ ನೀಡಿದರು.

ತುಮಕೂರಿನ ಸುಂಕಾಪುರ ಬಳಿ ನಡೆಯುತ್ತಿರುವ ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿ ಪರಿವೀಕ್ಷಣೆ ನಂತರ ಜಲಸಂಪನ್ಮೂಲ ಸಚಿವರೂ ಆಗಿರುವ ಶಿವಕುಮಾರ್ ಅವರು ಮಾಧ್ಯಮಗಳನ್ನು ಉದ್ದೇಶಿಸಿ ಶುಕ್ರವಾರ ಮಾತನಾಡಿದರು.

ಈ ವಿಚಾರದಲ್ಲಿ ಯಾವುದೇ ರೈತರು ಗಾಬರಿಯಾಗುವುದು ಬೇಡ. ನಾನು ಬೆಂಗಳೂರಿನಲ್ಲಿ ಅಧಿಕಾರಿಗಳ ಜೊತೆ ಚರ್ಚೆ ಮಾಡಿ, ತುಮಕೂರು ಜಿಲ್ಲೆಯ ರೈತರ ರಕ್ಷಣೆ ಬಗ್ಗೆ ತೀರ್ಮಾನ ಮಾಡುತ್ತೇನೆ. ಕೇವಲ ಕುಣಿಗಲ್ ಮಾತ್ರವಲ್ಲ ಎಲ್ಲಾ ಕ್ಷೇತ್ರಗಳ ಹಿತ ನಮಗೆ ಮುಖ್ಯ. ನಾವೆಲ್ಲರೂ ಸೇರಿ ಕಾನೂನು ಚೌಕಟ್ಟಿನಲ್ಲಿ ಕೆಲಸ ಮಾಡೋಣ. ನಿಮ್ಮ ಸಮಸ್ಯೆ ಏನೇ ಇದ್ದರೂ ನಾನು ಅದನ್ನು ಬಗೆಹರಿಸುತ್ತೇನೆ" ಎಂದರು. "ಕೇಂದ್ರ ಸಚಿವರಾದ ಸೋಮಣ್ಣ ಹಾಗೂ ಶಾಸಕರ ಸಲಹೆ ಮೇರೆಗೆ ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿ ಸ್ಥಳ ಪರಿಶೀಲನೆ ಮಾಡಲು ಬಂದಿದ್ದೇನೆ. ನಾನು ಒಂದು ಕ್ಷೇತ್ರಕ್ಕೆ ಸೀಮಿತವಾದವನಲ್ಲ. ಕರ್ನಾಟಕ ರಾಜ್ಯದ ನೀರಾವರಿ ಮಂತ್ರಿಯಾಗಿದ್ದೇನೆ. ತುಮಕೂರಿನ ಎಲ್ಲಾ ಕ್ಷೇತ್ರಗಳ ಅಭಿವೃದ್ಧಿ ನಮ್ಮ ಜವಾಬ್ದಾರಿ. ತುಮಕೂರಿನ ಜನರು ಪ್ರತಿ ಸಂದರ್ಭದಲ್ಲಿಯೂ ನಮಗೆ ಸಂಯಮದಿಂದ ಸಹಕಾರ ನೀಡಿದ್ದಾರೆ" ಎಂದರು.

ಗುತ್ತಿಗೆ ನೌಕರರಿಗೆ ಉದ್ಯೋಗ ಭದ್ರತೆ

ಅಧ್ಯಯನಕ್ಕೆ ಉಪಸಮಿತಿ ರಚಿಸಲು ನಿರ್ಧಾರ

ಬೆಂಗಳೂರು: ಸರ್ಕಾರದ ವಿವಿಧ ಇಲಾಖೆಗಳು ಮತ್ತು ನಿಗಮಗಳು/ಮಂಡಳಿಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರಿಗೆ ಉದ್ಯೋಗ ಭದ್ರತೆ ಒದಗಿಸುವ ಕಾರ್ಯಸಾಧ್ಯತೆಗಳ ಅಧ್ಯಯನ ನಡೆಸಲು ರಾಜ್ಯ ಸರ್ಕಾರ ಮುಂದಾಗಿದ್ದು, ಇದಕ್ಕಾಗಿ ಉಪಸಮಿತಿ ರಚಿಸಲು ನಿರ್ಧರಿಸಿದೆ.

ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಸಚಿವ ಎಚ್.ಕೆ.ಪಾಟೀಲ ಅವರು, ಈ ವಿಷಯವನ್ನು ತಿಳಿಸಿದರು.

ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳು ಮತ್ತು ನಿಗಮಗಳು/ಮಂಡಳಿಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರಿಗೆ ಉದ್ಯೋಗ ಭದ್ರತೆ ಮತ್ತು ಇತರ ಎಲ್ಲಾ ಸೌಲಭ್ಯಗಳನ್ನು ಒದಗಿಸುವ ಸಾಧಕ–ಬಾಧಕಗಳ ಕುರಿತು ಉಪಸಮಿತಿಯನ್ನು ರಚಿಸಲಾಗುತ್ತಿದ್ದು, ಈ ಸಮತಿಯು ಸಂಪುಟಕ್ಕೆ ವರದಿ ಸಲ್ಲಿಸಿ, ಶಿಫಾರಸುಗಳನ್ನು ಮಾಡಲಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ರಾಜ್ಯ ಹಾಗೂ ಜಿಲ್ಲಾಮಟ್ಟದ ಸರ್ಕಾರಿ ಕಾರ್ಯ ಕ್ರಮಗಳಲ್ಲಿ ಶಿಸ್ತು ತರುವ ಸಲುವಾಗಿ ವೇದಿಕೆ ಮೇಲೆ ಆಸೀನರಾಗುವ ಅತಿಥಿಗಳಿಗೆ ಕಡಿವಾಣ ವಿಧಿಸಲು ತೀರ್ಮಾನಿಸಲಾಗಿದ್ದು, ಸಂಖ್ಯೆಯನ್ನು 9ಕ್ಕೆ ಸೀಮಿತಗೊಳಿಸಲು ನಿಯಮ ರೂಪಿಸಲಾಗಿದೆ ಎಂದು ತಿಳಿಸಿದ್ದಾರೆ. ತೀರಾ ಅನಿವಾರ್ಯವಾದರೆ 13 ಮಂದಿ ಅತಿಥಿಗಳವರೆಗೆ ಅವಕಾಶ ನೀಡಬಹುದು. ಅತಿಥಿಗಳ ಸಂಖ್ಯೆ ನಿರ್ಧಾರ ಅಧಿಕಾರವನ್ನು ಜಿಲ್ಲಾ ಉಸ್ತುವಾರಿ ಸಚಿವರು ಹೊಂದಿರತಕ್ಕದ್ದು ಎಂದು ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ಮಾಹಿತಿ ನೀಡಿದರು.

ಶಿಷ್ಟಾಚಾರ ಪಟ್ಟಿ ಆಯಾ ಜಿಲ್ಲಾ ಉಸ್ತುವಾರಿ ಸಚಿವರು ಅಂತಿಮಗೊಳಿಸಲು ಅವಕಾಶ ಕಲ್ಪಿಸಲಾಗುತ್ತದೆ. ಈ ನಿರ್ಧಾರಕ್ಕೂ ಆರ್‌ಸಿಬಿ ತಂಡದ ಸನ್ಮಾನ ಕಾರ್ಯಕ್ರಮಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಪ್ರಶ್ನೆಯೊಂದಕ್ಕೆ ಸ್ಪಷ್ಟನೆ ನೀಡಿದರು. ಆಹ್ವಾನ ಪತ್ರಿಕೆಯಲ್ಲಿ ಇಲ್ಲದವರೂ ಕಾರ್ಯಕ್ರಮದ ವೇದಿಕೆಯಲ್ಲಿ ಬಂದು ಆಸೀನರಾಗುತ್ತಾರಲ್ಲ ಎಂಬ ಪ್ರಶ್ನೆಗೆ, "ಅದು ಶಿಷ್ಟಾಚಾರದ ವ್ಯಾಪ್ತಿಗೆ ಬರುವುದಿಲ್ಲ; ಅದು ಅಶಿಸ್ತು ಆಗುತ್ತದೆ' ಎಂದಷ್ಟೇ ಹೇಳಿದರು.

ಕನ್ನಡ ಜಾಗೃತಿ ಸಮಿತಿಗೆ ಸದಸ್ಯರ ನಾಮನಿರ್ದೇಶನ

ಬೆಂಗಳೂರು: ಕನ್ನಡ ಜಾಗೃತಿ ಸಮಿತಿಗಳಿಗೆ ರಾಜ್ಯದಲ್ಲಿ ಒಟ್ಟು 249 ಅಧಿಕಾರೇತರ ಸದಸ್ಯರನ್ನು ನಾಮನಿರ್ದೇಶನ ಮಾಡಿ ಸರಕಾರ ಆದೇಶ ಹೊರಡಿಸಿದೆ. 31 ಜಿಲ್ಲೆಗಳಲ್ಲಿ ಜಿಲ್ಲಾಮಟ್ಟದಲ್ಲಿ ತಲಾ 5 ಸದಸ್ಯರಂತೆ 155 ಸದಸ್ಯರನ್ನು ರಾಜ್ಯದಲ್ಲಿನ 11 ಮಹಾನಗರ ಪಾಲಿಕೆಗಳಿಗೆ ತಲಾ 6 ಸದಸ್ಯರಂತೆ 66 ಸದಸ್ಯರನ್ನು, ಬೆಂಗಳೂರಿನ 28 ವಿಧಾನಸಭೆ ಕ್ಷೇತ್ರಕ್ಕೆ 28 ಸದಸ್ಯರನ್ನು ಒಳಗೊಂಡು ಒಟ್ಟು 249 ಕನ್ನಡ ಜಾಗೃತಿ ಸಮಿತಿ ಸದಸ್ಯರನ್ನು ಸರಕಾರ ನಾಮನಿರ್ದೇಶನ ಮಾಡಿದೆ.

ಜವಳಿ ನೀತಿಯೊಂದಿಗೆ ಉದ್ಯೋಗ ಸೃಷ್ಟಿ ಗುರಿ

ಬೆಂಗಳೂರು: ಜವಳಿ ಹಾಗೂ ಸಿದ್ಧ ಉಡುಪು ಕ್ಷೇತ್ರದಲ್ಲಿ ಹೆಚ್ಚಿನ ಬಂಡವಾಳ ಆಕರ್ಷಣೆಯೊಂದಿಗೆ 2 ಲಕ್ಷ ಉದ್ಯೋಗ ಸೃಷ್ಟಿಗೆ ಪೂರಕವಾಗಿ ಜವಳಿ ನೀತಿ 2025–30 ರೂಪಿಸಲಾಗುವುದು ಎಂದು ಜವಳಿ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ.

ನೂತನ ಜವಳಿ ನೀತಿ ರಚನೆಗೆ ಸಲಹೆ ಪಡೆಯಲು ವಿಧಾನಸೌಧದಲ್ಲಿ ಕರೆದಿದ್ದ ಜನಪ್ರತಿನಿಧಿಗಳು, ಜವಳಿ ಉದ್ಯಮಿಗಳ ಸಭೆಯಲ್ಲಿ ಅವರು ಮಾತನಾಡಿದರು. ಇಂದಿನ ಸಭೆಯಲ್ಲಿ ವ್ಯಕ್ತವಾಗಿರುವ ಸಲಹೆಗಳನ್ನು ಪರಿಗಣಿಸಿ ಜವಳಿ ನೀತಿಯಲ್ಲಿ ಅಳವಡಿಸಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಜವಳಿ ಕ್ಷೇತ್ರದ ಅಭಿವೃದ್ಧಿಗೆ ಪೂರಕವಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. 2020ರಿಂದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ರಾಜ್ಯ ಜವಳಿ ಮೂಲ ಸೌಕರ್ಯ ಅಭಿವೃದ್ಧಿ ನಿಗಮಗಳ ಆಡಿಟ್ ಆಗಿರಲಿಲ್ಲ. ಈಗ ಆಡಿಟ್ ನಡೆದಿದೆ. ಕೈಮಗ್ಗ ಉತ್ಪನ್ನಗಳನ್ನು ಸರ್ಕಾರದ ಇಲಾಖೆಗಳಿಗೆ ಖರೀದಿ ಮಾಡಲು ಈಗಾಗಲೇ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ.

ಶೂನ್ಯ ಬಡ್ಡಿ ದರದ ಸಾಲದ ಮೇಲೂ ಜಿಎಸ್‌ಟಿ ವಿಧಿಸುತ್ತಿರುವುದಿಂದ ನೇಕಾರರಿಗೆ

ಬಡ್ಡಿ ರಹಿತ ಸಾಲ ಸಿಕ್ಕರೂ ಉಪಯೋಗ ಆಗುತ್ತಿಲ್ಲ. ಎಲ್ಲರ ಸಹಕಾರದೊಂದಿಗೆ ಜಿಎಸ್‌ಟಿ ತೆರವಿಗೆ ಪ್ರಯತ್ನ ಮಾಡಲಾಗುವುದು. ಬೆಳಗಾವಿಯಲ್ಲಿ ಜವಳಿ ಸಂಶೋಧನಾ ಕೇಂದ್ರ ಆರಂಭಿಸಲಾಗುವುದು. ಚರ್ಮ ಹೊರತುಪಡಿಸಿ ತಯಾರಾಗುವ ಚಪ್ಪಲಿ ಮತ್ತು ಶೂ ಉದ್ಯಮದ ಅಭಿವೃದ್ಧಿ ಬಗ್ಗೆಯೂ ನೀತಿ ರೂಪಿಸಬೇಕು ಎಂಬ ಬೇಡಿಕೆ ವ್ಯಕ್ತವಾಗಿದೆ.

ನೇಕಾರ ಸಮ್ಮಾನ್ ಯೋಜನೆ ನೆರವು ಹೆಚ್ಚಳಕ್ಕೆ ಬೇಡಿಕೆ: ನಷ್ಟದಲ್ಲಿರುವ ಸಹಕಾರ ಕ್ಷೇತ್ರದ ಜವಳಿ ಉದ್ಯಮದ ಆಸ್ತಿ ಮಾರಾಟಕ್ಕೆ ಅವಕಾಶ ನೀಡಿದೇ ಪುನಶ್ಚೇತನಕ್ಕೆ ಪ್ರಯತ್ನಿಸಲಾಗುವುದು. ನೇಕಾರ ಸಮ್ಮಾನ್? ಯೋಜನೆಯ ನೆರವನ್ನು ಐದು ಸಾವಿರ ರೂಗಳಿಂದ ಹತ್ತು ಸಾವಿರ ರೂ. ಗಳಿಗೆ ಹೆಚ್ಚಳ ಮಾಡುವ ಬೇಡಿಕೆ ಸೂಕ್ತವಾಗಿದ್ದು, ಪರಿಗಣಿಸಲಾಗುವುದು. ಕುಟುಂಬದಲ್ಲಿ ಒಬ್ಬರನ್ನು ಮಾತ್ರ ಪರಿಗಣಿಸುವ ಬದಲಿಗೆ ಎಲ್ಲ ಸದಸ್ಯರನ್ನು ಪರಿಗಣಿಸಲಾಗುವುದು ಎಂದು ಭರವಸೆ ನೀಡಿದರು.

ಜವಳಿ ಕ್ಷೇತ್ರದ ಅಭಿವೃದ್ಧಿಗೆ ಎಷ್ಟೇ ಯೋಜನೆ ರೂಪಿಸಿದರೂ ಬಜೆಟ್‌ನಲ್ಲಿ ಅಗತ್ಯ ಅನುದಾನ ಒದಗಿಸದಿದ್ದರೆ ಪ್ರಯೋಜನ ಆಗದು. ಆದ್ದರಿಂದ ಮುಖ್ಯಮಂತ್ರಿಗಳ ಬಳಿ ನಿಯೋಗ ತೆರಳಿ ಅನುದಾನ ಪ್ರಮಾಣ ಹೆಚ್ಚಳ ಮಾಡಲು ಮನವಿ ಮಾಡಬೇಕು ಎಂದು ಮಾಜಿ ಶಾಸಕ, ಕೆಎಚ್‌ಡಿಸಿ ಮಾಜಿ ಅಧ್ಯಕ್ಷ ಎಂ.ಡಿ. ಲ

ಲೋಕಾಯುಕ್ತ ಜನ ಸಂಪರ್ಕ ಸಭೆ

ಗದಗ: ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಸೆಪ್ಟೆಂಬರ್ 16 ರ ಮಂಗಳವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿಯಲ್ಲಿ ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಸಾರ್ವಜನಿಕರಿಂದ ದೂರು ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಕರ್ನಾಟಕ ಲೋಕಾಯುಕ್ತ ಪೊಲೀಸ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹಕಾರ ಸಂಘಗಳ ಗಮನಕ್ಕೆ

ಗದಗ: ಗದಗ ಜಿಲ್ಲೆಯ ಕೆಳಗಿನ ಸಹಕಾರ ಸಂಘಗಳು ಕಾರ್ಯಾಚರಣೆಯನ್ನು ನಡಸದೇ ಸಂಪೂರ್ಣವಾಗಿ ಸ್ಥಗಿತಗೊಂಡಿರುತ್ತವೆ. ಸುಮಾರು 05 ರಿಂದ 10 ವರ್ಷಗಳಿಂದ ಲೆಕ್ಕಪರಿಶೋಧನೆಯಾಗಿರುವುದಿಲ್ಲ ಮತ್ತು ನಿಗದಿತ ಅವಧಿಯಲ್ಲಿ ಚುನಾವಣೆ ಜರುಗಿರುವುದಿಲ್ಲ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಪ್ರಕಾರ ವಾರ್ಷಿಕ ಮಹಾಸಭೆಯನ್ನು ಜರುಗಿಸಿರುವುದಿಲ್ಲ.

ಆಡಳಿತ ಮಂಡಳಿಯ ಸದಸ್ಯರು ಹಾಗೂ ಸಾಮಾನ್ಯ ಸದಸ್ಯರು ಕಾರ್ಯ ಚಟುವಟಿಕೆಗಳಿಗೆ ಆಸಕ್ತಿ ತೋರಿಸದೇ ಇರುವುದು ಕಂಡು ಬಂದಿದ್ದು ಇರುತ್ತದೆ ಮತ್ತು ಅಡ್ಡಾವೆ ಪತ್ರಿಕೆಗಳು ಲಭ್ಯವಿರುವುದಿಲ್ಲ ಹಾಗೂ ಆಡಳಿತ ಮಂಡಳಿ ಸದಸ್ಯರ ವಿಳಾಸವು ಲಭ್ಯವಿಲ್ಲದ್ದರಿಂದ, ಈ ಕೆಳಗಿನ ಸಹಕಾರ ಸಂಘಗಳಿಗೆ ಸಂಬಂಧಪಟ್ಟವರು ಕಚೇರಿ ವೇಳೆಯಲ್ಲಿ ಸಹಕಾರ ಸಂಘಗಳ ಉಪನಿಬಂದಕರು, ಗದಗ ಜಿಲ್ಲೆ, ಗದಗ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ–125 , ಗದಗ ಇವರನ್ನು ಭೇಟಿ ಮಾಡಬಹುದಾಗಿದೆ. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ, ಡ.ಸ.ಹಡಗಲಿ ನಂ–2 ತಾ:ರೋಣ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ, ಸವಡಿನಂ–2 ತಾ:ರೋಣ ಕಟ್ಟಡ ನಿರ್ಮಾಣ ಕಾರ್ಮಿಕರ ಪತ್ತಿನ ಸಹಕಾರ ಸಂಘ ನಿ, ಗದಗ, ದಿ ಬಸವೇಶ್ವರ ಕೋ–ಆಪ. ಕ್ರೆಡಿಟ ಸೋಸಾಯಿಟಿ ಲಿ. ಮುಂಡರಗಿ, ಶ್ರೀ ಜಗದ್ಗುರು ಮೌನೇಶ್ವರ ಕೋ–ಆಪ್ ಕ್ರೆಡಿಟ್ ಸೊಸೈಟಿ ನಿ, ನರಗುಂದ, ನೇತ್ರಾವತಿ ಪತ್ತಿನ ಮಹಿಳಾ ಸಹಕಾರ ಸಂಘ ನಿ ಗಜೇಂದ್ರಗಡ, ಶ್ರೀ ಗಂಗಾಧರ ಮರ್ಚಂಟ್ಸ ಕೋಆಪ್ ಕ್ರೆಡಿಟ್ ಸೊಸೈಟಿ ಶಿಗ್ಲಿ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ. ಹರ್ತಿ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ. ಬೆಳವಣಕಿ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ. ಹಿರೇಹಾಳ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥಯ ಸಿಬ್ಬಂದಿ ಸಹಕಾರ ಉಪಹಾರ , ನಿ. ಗದಗ, ಮೌಲಾನ ಆಜಾದ ವಿವಿದೋದ್ದೇಶಗಳ ಸಹಕಾರ ಸಂಘ ನಿ, ಗದಗ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ಮದಗಾನೂರ , ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ. ಬೋಪಳಾಪೂರ

ಸಾರ್ವಜನಿಕ ಪ್ರಕಟಣೆ ಹೊರಡಿಸಿದ 15 ದಿನಗಳೊಳಗಾಗಿ ಸಂಬಂಧಪಟ್ಟವರು ಬಾರದೇ ಹೋದಲ್ಲಿ ಸಹಕಾರ ಸಂಘಗಳನ್ನು ಸಮಾಪನೆ ಮಾಡಲು ಕ್ರಮವಿಡಲಾಗವುದು. ಮುಂದೆ ಬರುವ ಯಾವುದೇ ಹೊಣೆಗಾರಿಕೆಗಳಿಗೆ ಸಮಾಪನಾದಿಕಾರಿಗಳು ಹೊಣೆಗಾರರಾಗಿರುವುದಿಲ್ಲವೆಂದು ಸಹಕಾರ ಸಂಘಗಳ ಉಪನಿಬಂಧಕರು, ಗದಗ ಜಿಲ್ಲೆ, ಗದಗ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ನೀರಾವರಿ ಘಟಕಗಳಿಗೆ ಅರ್ಜಿ ಆಹ್ವಾನ

ಕೊಪ್ಪಳ: 2025–26ನೇ ಸಾಲಿನಲ್ಲಿ ಪ್ರಧಾನಮಂತ್ರಿ ಕೃಷಿ ಸಿಂಚಾಯ ಯೋಜನೆಯಡಿಯಲ್ಲಿ ತುಂತುರು ನೀರಾವರಿ ಘಟಕಗಳಿಗೆ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ರೈತರು ಅರ್ಜಿ ನಮೂನೆಯೊಂದಿಗೆ ಆಧಾರ್ ಕಾರ್ಡ್, ನೀರಾವರಿ ಪ್ರಮಾಣ ಪತ್ರ, ಪಹಣಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಇದ್ದಲ್ಲಿ ಪ್ರಮಾಣ ಪತ್ರ, ನೋಟರಿಯೊಂದಿಗೆ ರೂ.20/– ಗಳ ಛಾಪಾ ಕಾಗದ, ಬ್ಯಾಂಕ್ ಪಾಸ್ ಬುಕ್, ಆರ್.ಟಿ.ಜಿ.ಎಸ್. ಪತ್ರಗಳನ್ನು ಸಲ್ಲಿಸಬೇಕು. ಎಫ್ಐಡಿಯನ್ನು ಕಡ್ಡಾಯವಾಗಿ ಹೊಂದಿರಬೇಕು.

ರೈತರು ಈಗಾಗಲೇ ಎಫ್ಐಡಿಯನ್ನು ಹೊಂದಿದ್ದಲ್ಲಿ ಅಥವಾ ಹೊಂದಿರದೆ ಇದ್ದಲ್ಲಿ ತಮ್ಮ ಎಲ್ಲಾ ಪಹಣಿಗಳನ್ನು ಎಫ್ಐಡಿಗೆ ಜೋಡಣೆ ಮಾಡಿಕೊಳ್ಳಬೇಕು. ಆಸಕ್ತ ರೈತರು ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಗಳಿಗೆ ತೆರಳಿ ಅರ್ಜಿ ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೊಪ್ಪಳದಲ್ಲಿ ಸಾರಿಗೆ ಅದಾಲತ್

ಕೊಪ್ಪಳ: ಸಾರಿಗೆ ಇಲಾಖೆಗೆ ಸಂಬಂಧಿಸಿದ ಸಾರ್ವಜನಿಕರ ಕುಂದು ಕೊರತೆಗಳ ಅಹವಾಲು ಸ್ವೀಕರಿಸಲು ಕೊಪ್ಪಳ ನಗರದ ಹೊಸಪೇಟೆ ರಸ್ತೆಯ ಎಸ್.ಕೆ. ಪಾಟೀಲ್ ಬಡಾವಣೆಯಲ್ಲಿರುವ ಆರ್.ಟಿ.ಓ ಕಚೇರಿಯಲ್ಲಿ ಸೆಪ್ಟೆಂಬರ್ 20 ರಂದು ಸಂಜೆ 4 ಗಂಟೆಗೆ ಸಾರಿಗೆ ಅದಾಲತ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೊಪ್ಪಳ ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.17ರಂದು ಕ್ಯಾಂಪಸ್ ಸಂದರ್ಶನ

ಕೊಪ್ಪಳ: ಕುಕನೂರಿನ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಸೆಪ್ಟೆಂಬರ್ 17 ರಂದು ಬೆಳಿಗ್ಗೆ 10 ಗಂಟೆಗೆ ಕೊಪ್ಪಳ ತಾಲ್ಲೂಕಿನ ಬೇವಿನಳ್ಳಿಯ ಕಿರ್ಲೋಸ್ಕರ್ ಫೆರಸ್ ಇಂಡಸ್ಟ್ರೀಸ್ ಲಿ. ಕಂಪನಿಯಿಂದ ಅಪ್ರೆಂಟಿಷಿಪ್ ಕ್ಯಾಂಪಸ್ ಸಂದರ್ಶನವನ್ನು ಏರ್ಪಡಿಸಲಾಗಿದೆ.

ಎಲೆಕ್ಟ್ರಿಷಿಯನ್, ಫಿಟ್ಟರ್, ವೆಲ್ಡರ್, ಟರ್ನರ್, ಡೀಸೆಲ್ ಮೆಕ್ಯಾನಿಕ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್ ವೃತ್ತಿಗಳಲ್ಲಿ ಉತ್ತೀರ್ಣಗೊಂಡ 18 ರಿಂದ 24 ವರ್ಷದ ಅಭ್ಯರ್ಥಿಗಳು ಕ್ಯಾಂಪಸ್ ಸಂದರ್ಶನದಲ್ಲಿ ಭಾಗವಹಿಸಬಹುದು. ಲಿಖಿತ ಪರೀಕ್ಷೆ ಹಾಗೂ ಸಂದರ್ಶನದ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ರೂ.13,000/– ಗಳ ಸ್ಟೈಫಂಡ್ ನೀಡಲಾಗುವುದು.

ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲ ಪ್ರಮಾಣಪತ್ರಗಳು, ಅಂಕಪಟ್ಟಿಗಳ ಮೂಲ ಪ್ರತಿಗಳು ಹಾಗೂ 1 ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್‌ಬುಕ್ ಪ್ರತಿ, ಆಧಾರ್ ಹಾಗೂ ಪ್ಯಾನ್ ಕಾರ್ಡ್‌ಗಳ ಜೆರಾಕ್ಸ್ ಪ್ರತಿಗಳು, ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರಗಳು ಮತ್ತು ಬಯೋಡೇಟಾದೊಂದಿಗೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 9964247098, 8618952961 ಮತ್ತು 9945789400 ಗೆ ಸಂಪರ್ಕಿಸಬಹುದು ಎಂದು ಕುಕನೂರು ಐಟಿಐ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.15ರಿಂದ ಲಿಂಗತ್ವ ಅಲ್ಪಸಂಖ್ಯಾತರ-ಮಾಜಿ ದೇವದಾಸಿ ಮಹಿಳೆಯರ ಸಮೀಕ್ಷೆ

ವ್ಯವಸ್ಥಿತವಾಗಿ ಸಮೀಕ್ಷಾ ಕಾರ್ಯ ಕೈಗೊಳ್ಳುವಂತೆ ಸೂಚನೆ



ವಿಜಯಪುರ: ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಇದೇ ಸೆ.15 ರಿಂದ 45 ದಿನಗಳ ನಡೆಯಲಿದ್ದು, ವ್ಯವಸ್ಥಿತವಾಗಿ ಸಮೀಕ್ಷಾ ಕಾರ್ಯವನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಸೂಚನೆ ನೀಡಿದ್ದಾರೆ.

ಶುಕ್ರವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಸಭೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಭಿತ್ತಿಪತ್ರಗಳನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದ ಅವರು, 45 ದಿನಗಳ ಕಾಲ ನಡೆಯುವ ಸಮೀಕ್ಷೆಯಲ್ಲಿ ಸರ್ಕಾರಿ ತಾಲೂಕಾ ಆಸ್ಪತ್ರೆಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಮತ್ತು ಶಿಶು ಅಭಿವೃದಿ ಯೋಜನಾ ಕಚೇರಿಗಳಲ್ಲಿ ಮಾಜಿ ದೇವದಾಸಿ ಮಹಿಳೆಯರ ಸಮೀಕ್ಷೆಯನ್ನು ವ್ಯವಸ್ಥಿತವಾಗಿ ಕೈಗೊಂಡು ಸಮೀಕ್ಷಾ ಕಾರ್ಯ ಯಶಸ್ವಿಗೊಳಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಸಮೀಕ್ಷೆ ಕಾರ್ಯದ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು,

ಮೊದಲ ಬಾರಿಗೆ ರಾಜ್ಯದಾದ್ಯಂತೆ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ 15 ಜಿಲ್ಲೆಗಳಲ್ಲಿ ಮಾಜಿ ದೇವದಾಸಿ ಮಹಿಳೆಯರ ಸಾಮಾಜಿಕ, ಆರ್ಥಿಕ ಸ್ಥಿತಿಗತಿಗಳ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ ಪುರ್ನವಸತಿ ಕಲ್ಪಿಸಲು ಸಮೀಕ್ಷೆ ನಡೆಸಲಾಗುತ್ತಿದೆ. ಈ ಎರಡು ಸಮೀಕ್ಷೆಗಳನ್ನು ರಾಜ್ಯ ಮಹಿಳಾ ಅಭಿವೃದ್ದಿ ನಿಗಮದಿಂದ ನಡೆಸಲಾಗುವುದು. ಸಮೀಕ್ಷೆ ಕಾರ್ಯ ಕೈಗೊಳ್ಳಲು ಈಗಾಗಲೇ ಪೂರ್ವತಯಾರಿ ಮಾಡಿಕೊಂಡಿದ್ದು, ಮೊಬೈಲ್ ಆಪ್ ಮೂಲಕ ಟ್ರಾನ್ಸಜೆಂಡರ್ ಸಮೀಕ್ಷೆಗೆ "KARMANI Web Application ಅನ್ನು ಹಾಗೂ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯನ್ನು ಸೇವಾ ಸಿಂಧು ವೆಬ್ ಅಪ್ಲಿಕೇಶನ್ ಮೂಲಕ ಪ್ರತ್ಯೇಕವಾಗಿ ಎರಡು ಸಮೀಕ್ಷೆಗಳನ್ನು ಕೈಗೊಳ್ಳಲಾಗುತ್ತದೆ.

ಲಿಂಗತ್ವ ಅಲ್ಪಸಂಖ್ಯಾತರ ಮೂಲಹಂತದ ಸಮೀಕ್ಷೆಯನ್ನು ಜಿಲ್ಲೆಯ ಇಂಡಿ, ಸಿಂದಗಿ, ಮುದ್ದೇಬಿಹಾಳ, ಬಸವನಬಾಗೇವಾಡಿ ತಾಲೂಕಾ ಆಸ್ಪತ್ರೆಗಳಲ್ಲಿ ಹಾಗೂ ಜಿಲ್ಲಾ ಆಸ್ಪತ್ರೆ ವಿಜಯಪುರದಲ್ಲಿ ನಡೆಸಲಾಗುತ್ತದೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯನ್ನು ಜಿಲ್ಲೆಯ 07 ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಕಚೇರಿಗಳಲ್ಲಿ ನಡೆಸಲಾಗುತ್ತದೆ. ಲಿಂಗತ್ವ ಅಲ್ಪಸಂಖ್ಯಾರ ಮೂಲಹಂತದ ಸಮೀಕ್ಷೆಯನ್ನು ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದವರ ಮೂಲಕವೇ ಸಮೀಕ್ಷೆ ಕೈಗೊಳ್ಳುತ್ತಿರುವುದು ವಿಶೇಷವಾಗಿದೆ. ಮಾಜಿ ದೇವದಸಿ ಮಹಿಳೆಯರ ಮರು ಸಮೀಕ್ಷೆಯನ್ನು ಕೈಗೊಳ್ಳಲು ಗುರುತಿಸಲಾದ ಸಮೀಕ್ಷೆದಾರರಿಗೆ ಹಾಗೂ ದೇವದಾಸಿ ಪುರ್ನವಸತಿ ಯೋಜನಾ ಘಟಕದ ಅಧಿಕಾರಿ–ಸಿಬ್ಬಂದಿಗಳು ಸಮೀಕ್ಷೆಗಳನ್ನು ಕೈಗೊಳ್ಳಲಿದ್ದು, ಎಲ್ಲರೂ ಸಕ್ರೀಯವಾಗಿ ಸಮೀಕ್ಷೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು. ಈ ಎರಡು ಶೋಷಿತ ಸಮುದಾಯದ ಪ್ರತಿಯೊಬ್ಬರು ಸಮೀಕ್ಷೆಗೊಳಪಡಿಸಲು ಎಲ್ಲರೂ ಕೈ ಜೋಡಿಸಬೇಕು ಎಂದು ಅವರು ಹೇಳಿದರು.

ಉದ್ಯಾನವನಗಳ ಅಭಿವೃದ್ಧಿಗೆ ಕ್ರಮ : 4 ಸ್ಥಾಯಿ ಸಮಿತಿ ರಚನೆಗೆ ಅಸ್ತು

ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಿ

ರಬಕವಿ–ಬನಹಟ್ಟಿ: ನಗರಸಭೆಯ ಸಿಬ್ಬಂದಿ ವರ್ಗದವರು ಸರಿಯಾದ ಸಮಯಕ್ಕೆ ಕಾರ್ಯಾಲಯಕ್ಕೆ ಆಗಮಿಸುವುದರ ಜೊತೆಗೆ ನಗರಸಭೆಯ ಸದಸ್ಯರ ಮತ್ತು ಸಾರ್ವಜನಿಕರ ಸಮಸ್ಯೆಗಳಿಗೆ ಸೂಕ್ತ ರೀತಿಯಲ್ಲಿ ಸ್ಪಂದಿಸಬೇಕು ಎಂದು ರಬಕವಿ ಬನಹಟ್ಟಿ ನಗರಸಭೆಯ ಅಧ್ಯಕ್ಷೆ ವಿದ್ಯಾ ಧಬಾಡಿ ಸಿಬ್ಬಂದಿ ವರ್ಗಕ್ಕೆ ತಿಳಿ ಹೇಳಿದರು.

ಅವರು ಶುಕ್ರವಾರ ರಬಕವಿ ಬನಹಟ್ಟಿ ನಗರಸಭೆಯ ಸಭಾ ಭವನದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪೌರಾಯುಕ್ತ ರಮೇಶ ಜಾಧವ, ಅಧಿಕಾರಿಗಳು ಸದಸ್ಯರ ಹಾಗೂ ಸಾರ್ವಜನಿಕರ ಯಾವುದೇ ರೀತಿಯ ಸಮಸ್ಯೆಗಳಿದ್ದರೂ ಸೂಕ್ತವಾಗಿ ಸ್ಪಂದಿಸಲಾಗುವುದು ಎಂದು ತಿಳಿಸಿದರು.

ನಗರಸಭೆಯ ಸದಸ್ಯ ಯಲ್ಲಪ್ಪ ಕಟಗಿ ಮಾತನಾಡಿ, ನಗರಸಭೆಯ ವ್ಯಾಪ್ತಿಯಲ್ಲಿ 150 ಕ್ಕೂ ಹೆಚ್ಚು ಉದ್ಯಾನವನಗಳು ಇವೆ. ಇವುಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಅಧಿಕಾರಿಗಳು ಗಮನ ನೀಡಬೇಕು. ಅತಿಕ್ರಮಣ ಹೊಂದಿದ ಉದ್ಯಾನವನಗಳ ಕುರಿತು ಪರಿಶೀಲನೆ ಮಾಡಬೇಕು. ಅವುಗಳನ್ನು ಮರಳಿ ನಗರಸಭೆ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ನಗರದಲ್ಲಿ ಬೀದಿ ನಾಯಿಗಳಿಂದ ಜನರಿಗೆ ತೊಂದರೆಯಾಗಿದೆ. ಅವುಗಳ ಕುರಿತು ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಸದಸ್ಯರು ಆಗ್ರಹಿಸಿದರು. ಈಗಾಗಲೇ ಬೀದಿ ನಾಯಿಗಳ ಕಾಟವನ್ನು ತಪ್ಪಿಸುವ ನಿಟ್ಟಿನಲ್ಲಿ ಹಲವಾರು ಕ್ರಮಗಳನ್ನು ಹಂತ ಹಂತವಾಗಿ ತೆಗೆದುಕೊಳ್ಳಲಾಗುತ್ತಿದೆ. ಈಗಾಗಲೇ ಅವುಗಳಿಗೆ ಶಸ್ತ್ರ ಚಿಕಿತ್ಸೆಯನ್ನು ಮಾಡಲಾಗುತ್ತದೆ. ಒಂದು ಬೀದಿ ನಾಯಿಯ ಸಂತಾನಹರಣಕ್ಕೆ ರೂ. 1600 ದಷ್ಟು ಖರ್ಚಾಗುತ್ತದೆ.

ರಾಜೀವ ಗಾಂಧಿ ವಸತಿ ಯೋಜನೆಯ ಅಡಿಯಲ್ಲಿ ಆನಲೈನ್ ಮೂಲಕ ಜನರು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಪೌರಾಯುಕ್ತ ರಮೇಶ ಜಾಧವ ತಿಳಿಸಿದರು.

2025–26 ನೇ ಸಾಲಿನಲ್ಲಿ ಎಸ್ ಎಫ್ ಸಿ ಯೋಜನೆ ಅಡಿಯಲ್ಲಿ ಶೇ. 24.10, ಶೇ. 7.25 ಯೋಜನೆಯ ಅಡಿಯಲ್ಲಿ ಫಲಾನುಭವಿಗಳ ಆಯ್ಕೆಗಾಗಿ 101 ಅರ್ಜಿಗಳು ಬಂದಿವೆ. ಇದರಲ್ಲಿ 59 ಅರ್ಜಿಗಳು ಅರ್ಹವಾಗಿವೆ. ಆದರೆ ಕೇವಲ ಐವತ್ತು ಫಲಾನುಭವಿಗಳಿಗೆ ಮಾತ್ರ ಯೋಜನೆ ಸೌಲಭ್ಯ ದೊರೆಯಲಿದೆ. ಹೆಚ್ಚುವರಿ ಅರ್ಹ ಫಲಾನುಭವಿಗಳಿಗೆ ಮುಂದಿನ ಬಾರಿ ನೀಡಲು ಸದಸ್ಯರು ತಿಳಿಸಿದರು. ಈ ಸಂದರ್ಭದಲ್ಲಿ ಸ್ಥಾಯಿ ಸಮಿತಿ ಚೇರಮನ್ನರ ಅಧಿಕಾರವಧಿ ಮುಗಿದ ಹಿನ್ನಲೆಯಲ್ಲಿ ಕೆಲವೇ ದಿನಗಳಲ್ಲಿ ವಿಶೇಷ ಸಭೆ ಕರೆದು 4 ಸ್ಥಾಯಿ ಸಮಿತಿಗಳನ್ನು ರಚನೆ ಮಾಡಲಾಗುವುದು ಎಂದು ಪೌರಾಯುಕ್ತ ರಮೇಶ ಜಾಧವ ತಿಳಿಸಿದರು.

ಸ್ಕ್ರಾಪ್ ವಾಹನಗಳು, ಜೀವಿತಾವಧಿ ಮುಗಿಸಿದ ವಾಹನಗಳ ಮೌಲೀಕರಣ ಸೇರಿದಂತೆ ಹಲವಾರು ವಿಷಯಗಳಿಗೆ ಟೆಂಡರ್ ಕರೆಯಲು ಮತ್ತು ಬೇರೆ ವಿಷಯಗಳಿಗೆ ಸದಸ್ಯರು ಅನುಮೋದನೆಯನ್ನು ಸೂಚಿಸಿದರು. ಉಪಾಧ್ಯಕ್ಷರಾದ ದೀಪಾ ಗಾಡಿವಡ್ಡರ, ನಗರಸಭಾ ಸದಸ್ಯರಾದ ಶಶಿಕಲಾ ಸಾರವಾಡ, ಗೌರಿ ಮಿಳ್ಳಿ, ದುರ್ಗವ್ವ ಹರಿಜನ, ಜಯಶ್ರೀ ಬಾಗೇವಾಡಿ, ಪ್ರಭಾಕರ ಮೊಳೇದ, ಅರುಣ ಬುದ್ನಿ, ಶಿವಾನಂದ ಬುದ್ನಿ, ಶ್ರೀಶೈಲ ಬೀಳಗಿ, ಸಂಜಯ ತೆಗ್ಗಿ, ಯಲ್ಲಪ್ಪ ಕಟಗಿ, ಯೂನೂಸ ಚೌಗಲಾ, ಬಸವರಾಜ ಗುಡೋಡಗಿ, ರೇಖಾ ಕೊರ್ತಿ, ಸದಾಶಿವ ಪರೀಟ, ಚಿದಾನಂದ ಹೊರಟ್ಟಿ, ಬಾಳವ್ವ ಕಾಖಂಡಕಿ, ಪ್ರತಿಭಾ ಹಳ್ಳೂರ, ಶ್ರೀಶೈಲ ಆಲಗೂರ, ಸಾವಿತ್ರಿ ಹಕ್ಕಲದಡ್ಡಿ,, ರಾಹುಲ ಕಲಾಲ, ವಿಜಯ ಕಲಾಲ, ನಗರಸಭೆ ಅಧಿಕಾರಿಗಳಾದ ಸುನೀಲ ಬಬಲಾದಿ, ಬಾಬುರಾವ ಕಮತಗಿ, ಶೋಭಾ ಹೊಸಮನಿ, ಪ್ರಶಾಂತ ಪಾಟೀಲ, ಸುನೀಲ ಬಾಗೇವಾಡಿ, ಅಮಿರಖಾನ ಖಿಲೀಫಾ, ಮಹಾವೀರ ದೈಗೊಂಡ, ಭೀಮು ಬಾಡಗಿ, ಅಭಿನಂದನ ಸೋನಾರ, ಲಕ್ಷ್ಮಿ ತೊನಶ್ಯಾಳ, ಬಸವರಾಜ ಚಿಂಚಖಂಡಿ ಸೇರಿದಂತೆ ಅನೇಕರು ಇದ್ದರು.

ನಾಳೆ ಸ್ವಯಂ ಪ್ರೇರಿತ ರಕ್ತದಾನ ಶಿಬಿರ

ರಬಕವಿ–ಬನಹಟ್ಟಿ: ತಾಲೂಕಿನ ಪ್ರತಿಷ್ಠಿತ ವಿದ್ಯಾಸಂಸ್ಥೆಯಾದ ಹಜಾರೆ ಫೌಂಡೇಶನ್ ರಬಕವಿಯವರ ಪದ್ಮಾವತಿ ಸಮೂಹ ಶಿಕ್ಷಣ ಸಂಸ್ಥೆ ಹಾಗೂ ಹಜಾರೆ ಬಜಾರ ವತಿಯಿಂದ ಸಂಸ

15ರಂದು ಇಂಜಿನೀಯರ ಮ್ಯಾರಥಾನ್

ಬಾಗಲಕೋಟೆ: ಭಾರತ ರತ್ನ ಸರ್ ಎಂ.ವಿಶ್ವೇಶ್ವರಯ್ಯನವರ ಜನ್ಮ ದಿನಾಚರಣೆ ಅಂಗವಾಗಿ ಅಭಿಯಂತರರ ದಿನಾಚರಣೆ ಪ್ರಯುಕ್ತ ಸೆಪ್ಟೆಂಬರ 15 ರಂದು ಬೆಳಿಗ್ಗೆ 6 ಗಂಟೆಗೆ ಇಂಜಿನೀಯರ ಮ್ಯಾರಥಾನ್–2025 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬಾಗಲಕೋಟೆ ಪಟ್ಟಣ ಅಭಿವೃದ್ದಿ ಪ್ರಾಧಿಕಾರದ ಅಭಿಯಂತರರ ಪ್ರಾಯೋಜಕತ್ವದಲ್ಲಿ ಮ್ಯಾರಥಾನ್ ನಡೆಸಲಾಗುತ್ತಿದ್ದು, ಅಂದು ಬೆಳಿಗ್ಗೆ 6 ಗಂಟೆಗೆ ನವನಗರದ ಕಾಳಿದಾಸ ಸ್ಕೂಲ್ ಮೈದಾನದಿಂದ ಪ್ರಾರಂಭವಾಗಿ ವಿದ್ಯಾಗಿರಿ ಸರ್ಕಲ್ ರೋಡ ನಂ.19 ಮಾರ್ಗವಾಗಿ ಬಿಟಿಡಿಎ ವರೆಗೆ ಮ್ಯಾರಥಾನ್ ನಡೆಯಲಿದೆ. ನಂತರ ಬಿಟಿಡಿಎ ಆವರಣದಲ್ಲಿರುವ ಸರ್ ಎಂ.ವಿಶ್ವೇಶ್ವರಯ್ಯನವರ ಪುತ್ಥಳಿಗೆ ಪುಷ್ಪಾರ್ಚಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಬಿಟಿಡಿಎ ಮುಖ್ಯ ಅಭಿಯಂತರ ಚಂದ್ರಹಾಸ ಬಂಡಿ, ಆಲಮಟ್ಟಿ ಕೆಬಿಜೆಎನ್ಎಲ್ ಮುಖ್ಯ ಅಭಿಯಂತರ ಡಿ.ಬಸವರಾಜ, ಕೆ.ಪಿ.ಟಿ.ಸಿ.ಎಲ್ ಮುಖ್ಯ ಅಭಿಯಂತರ ಕಾಶೀನಾಥ ಹಿರೇಮಠ, ವಿಶೇಷ ಆಹ್ವಾನಿತರಾಗಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ, ಜಿ.ಪಂ ಜಿ.ಪಂ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಸೇರಿದಂತೆ ಇತರರು ಆಗಮಿಸಲಿದ್ದಾರೆ.

ಹೊಸ ನ್ಯಾಯಬೆಲೆ ಅಂಗಡಿಗೆ ಅರ್ಜಿ

ಬಾಗಲಕೋಟೆ: ಬೀಳಗಿ ತಾಲೂಕಿನ ಜಾನಮಟ್ಟಿ, ಜಮಖಂಡಿ ತಾಲೂಕಿನ ತೊದಲಬಾಗಿ, ಮುಧೋಳ ತಾಲೂಕಿನ ಮಂಟೂರ, ತಿಮ್ಮಾಪೂರ ಗ್ರಾಮಗಳಿಗೆ ಹೊಸದಾಗಿ ನ್ಯಾಯಬೆಲೆ ಪ್ರಾರಂಭಿಸಲು ಮಂಜೂರಾತಿ ನೀಡುವ ಸಲುವಾಗಿ ಅರ್ಹ ಸಂಘ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಸಹಕಾರಿ ಸಂಘವು ಕನಿಷ್ಟ ಮೂರು ವರ್ಷಗಳಿಂದ ಚಾಲನೆಯಲ್ಲಿದ್ದು, ಹಿಂದಿನ ಎರಡು ವರ್ಷಗಳಲ್ಲಿ ಕನಿಷ್ಟ 2 ಲಕ್ಷ ರೂ. ಗಳ ನಿರಂತರ ಬ್ಯಾಂಕ್ ಬ್ಯಾಲೆನ್ಸ್ ಹೊಂದಿರಬೇಕು. ವಿಕಲಚೇತನ ಹಾಗೂ ತೃತೀಯ ಲಿಂಗದ ವ್ಯಕ್ತಿಗಳನ್ನು ಹೊರತುಪಡಿಸಿ ಖಾಸಗಿ ವ್ಯಕ್ತಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿರುವದಿಲ್ಲ. ಕನಿಷ್ಟ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿರಬೇಕು.

ಸದರಿ ಪ್ರಕಟಣೆಯನ್ನು ಯಾವುದೇ ಮುನ್ಸೂಚನೆ ನೀಡದೇ ರದ್ದುಪಡಿಸುವ ಅಧಿಕಾರವನ್ನು ಸಕ್ಷಮ ಪ್ರಾಧಿಕಾರ ಹೊಂದಿರುತ್ತದೆ. ಅರ್ಜಿ ನಮೂನೆ ಹಾಗೂ ಇತರೆ ಮಾಹಿತಿಗಾಗಿ ಆಯಾ ತಹಶೀಲ್ದಾರ ಕಚೇರಿ ಸಂಪರ್ಕಿಸಿ ಪಡೆದುಕೊಂಡು ಭರ್ತಿ ಮಾಡಿದ ಅರ್ಜಿ ನಮೂನೆಯ ಜೊತೆಗೆ ದಾಖಲಾತಿಗಳೊಂದಿಗೆ ಅಕ್ಟೋಬರ 8 ರಂದು ಸಂಜೆ 5.30 ರೊಳಗಾಗಿ ಸಲ್ಲಿಸುವಂತೆ ಆಹಾರ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ15 ರಂದು ಸೈಕಲ್ ರ್ಯಾಲಿ

ಧಾರವಾಡ: ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಸೆಪ್ಟೆಂಬರ 15, 2025 ರಂದು ಬೆಳಿಗ್ಗೆ 7 ಗಂಟೆಗೆ ನಗರದ ಕೆಸಿಡಿ ಮೈದಾನದಿಂದ ಪ್ರಾರಂಭಗೊಂಡು ಸಪ್ತಾಪುರ ಭಾವಿ, ದಾಸನಕೊಪ್ಪ ಸರ್ಕಲ್, ಜಂಬಗಿ ಹಾಸ್ಪಿಟಲ್, ಪೋಲೀಸ್ ಸ್ಟೇಶನ್, ಎಲ್.ಎ. ಕ್ಯಾಂಟೀನ್, ಬಿ.ಆರ್.ಟಿ.ಸಿ. ಜ್ಯುಬಲಿ ಸರ್ಕಲ್ ಮಾರ್ಗವಾಗಿ ಆರ್.ಎನ್.ಶೆಟ್ಟಿ ಕ್ರೀಡಾಂಗಣದವೆಗೆ ಸೈಕಲ್ ರ್ಯಾಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲ ಸಾರ್ವಜನಿಕರು ಪಾಲ್ಗೊಂಡು ಯಶಸ್ವಿಗೊಳಿಸಲು ಕೋರಲಾಗಿದೆ. ಕ್ಯೂಆರ್ ಕೋಡ ಬಳಸಿ ನೋಂದಣಿಯನ್ನು ಮಾಡಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಕಚೇರಿ ದೂರವಾಣಿ ಸಂಖ್ಯೆ ಜಿಲ್ಲಾ ಕಚೇರಿ (0836–2447201), ಧಾರವಾಡ (0836–2440194), ಹುಬ್ಬಳ್ಳಿ (0836–2278066), (08370–284159) ನವಲಗುಂದ (08380–229937), ಕುಂದಗೋಳ (08304–290464) ಗಳಿಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೈಕಲ್ ಜಾಥಾಗೆ ನೊಂದಣಿ ಪ್ರಾರಂಭ

ಗದಗ: ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಸೆಪ್ಟೆಂಬರ್ 15ರಂದು ಆಚರಿಸಲಾಗುತ್ತಿದ್ದು, ದಿನಾಚರಣೆಯ ನಿಮಿತ್ತ ಜಿಲ್ಲಾಧಿಕಾರಿಗಳು, ಗದಗ ರವರು ಸೆಪ್ಟೆಂಬರ್ 15ರಂದು ಬೆಳಿಗ್ಗೆ 6.30 ಗಂಟೆಗೆ ಬಸವೇಶ್ವರ ಸರ್ಕಲ್ನಿಂದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ವರೆಗೆ ಸೈಕಲ್ ಜಾಥವನ್ನು ಹಮ್ಮಿಕೊಳ್ಳಲು ಸೂಚಿಸಿರುತ್ತಾರೆ.

ಸೈಕಲ್ ಜಾಥಾದಲ್ಲಿ ಭಾಗವಹಿಸಲು 14 ವರ್ಷ ಮೇಲ್ಪಟ್ಟ ಪುರುಷರು ಮಹಿಳೆಯರು ಸಾರ್ವಜನಿಕರು ವಿದ್ಯಾರ್ಥಿಗಳು ಹಾಗೂ ಸರ್ಕಾರಿ ಅಧಿಕಾರಿಗಳು ಸಿಬ್ಬಂದಿಗಳು ಸೇರಿದಂತೆ ಎಲ್ಲರೂ ಭಾಗವಹಿಸಬಹುದಾಗಿದ್ದು ಸೈಕಲ್ ಜಾಥಾದಲ್ಲಿ ಭಾಗವಹಿಸುವವರು https://forms.gle/V73qVTmaX9cB1m7t8 ಈ ಲಿಂಕ್ ಮೂಲಕ ಸೆಪ್ಟೆಂಬರ್ 13ರ ಸಂಜೆ 5 ಗಂಟೆಯೊಳಗೆ ನೊಂದಾಯಿಸಿಕೊಳ್ಳಬಹುದಾಗಿರುತ್ತದೆ.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಭಾಗವಹಿಸಿ "ನನ್ನ ಮತ ನನ್ನ ಹಕ್ಕು" ಎಂಬ ಮಹತ್ವದ ಆಶಯದೊಂದಿಗೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಎಂದು ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಗದಗ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ

ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳ ಗಮನಕ್ಕೆ

ಗದಗ: ದಿನಾಂಕ:15–09–2025 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಜಿಲ್ಲಾಧಿಕಾರಿಗಳ ಆಡಿಟೋರಿಯಮ್ ಹಾಲ್ನಲ್ಲಿ ಬೆಳಿಗ್ಗೆ 10 ಗಂಟೆಗೆ ಆಚರಿಸಲಾಗುತ್ತಿದೆ.

ಕಾರ್ಯಕ್ರಮಕ್ಕೆ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು, ಗದಗ ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ವರ್ಗಗಳ ಪರಿಶಿಷ್ಟ ಜಾತಿಗಳ ಹಿಂದುಳಿದ ವರ್ಗಗಳ ಅಲ್ಪಸಂಖ್ಯಾತ ವರ್ಗಗಳ ಮುಖಂಡರುಗಳು ಹಾಗೂ ಸರ್ವಸದಸ್ಯರು, ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ದಿನಾಂಕ: 15–09–2025 ರಂದು ನಡೆಯುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ಕಾರ್ಯಕ್ರಮಕ್ಕೆ ಆಗಮಿಸಬೇಕೆಂದು ಕೋರಿದೆ.

ನಾಳೆ ಉಚಿತ ಆರೋಗ್ಯ ತಪಾಸಣೆ

ಕೊಪ್ಪಳ: ಇತ್ತೀಚೆಗಿನ ವರ್ಷಗಳಲ್ಲಿ ವಯಸ್ಸಿನ ಅಂತರವಿಲ್ಲದೆ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿರುವ ಕಾರಣ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಘಟಕವು ನಗರದ ಕೆ.ಎಸ್. ಆಸ್ಪತ್ರೆ ಸಹಯೋಗದಲ್ಲಿ ಸೆ. 14ರಂದು ಬೆಳಿಗ್ಗೆ 9 ಗಂಟೆಯಿಂದ ಪ್ರಶಾಂತ್ ಬಡಾವಣೆಯಲ್ಲಿರುವ ಶ್ರೀ ವಿಠ್ಠಲಕೃಷ್ಣ ದೇವಸ್ಥಾನದ ಸಮುದಾಯ ಭವನದಲ್ಲಿ ಉಚಿತವಾಗಿ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಂಡಿದೆ.

ಆರಂಭಿಕ ಹಂತದಲ್ಲಿ ಮಹಾಸಭಾದ ಸದಸ್ಯತ್ವ ಹೊಂದಿದ ಸದಸ್ಯರಿಗೆ ಮಾತ್ರ ಆದ್ಯತೆ ಮೇರೆಗೆ ತಪಾಸಣೆ ನಡೆಯಲಿದೆ. ಮಧುಮೇಹ, ರಕ್ತದೊತ್ತಡ, ಹೃದಯ ಸಂಬಂಧಿ ಕಾಯಿಲೆಗಳ ಪತ್ತೆಗೆ ಇಸಿಜಿ ಸೇರಿದಂತೆ ಹಲವು ಪರೀಕ್ಷೆ ಹಾಗೂ ವೈದ್ಯರೊಂದಿಗೆ ಸಮಾಲೋಚನೆ ಸೌಲಭ್ಯ ಇರಲಿದೆ.

ಆರೋಗ್ಯ ಶಿಬಿರ ಮತ್ತು ಸದಸ್ಯತ್ವ ನೋಂದಣಿಗಾಗಿ ಸಂಘದ ರಾಜ್ಯ ಕೇಂದ್ರ ಕಾರ್ಯಕಾರಿಣಿ ಸಮಿತಿ ಸದಸ್ಯ ಎಚ್.ಬಿ. ದೇಶಪಾಂಡೆ 7348983604 ಅಥವಾ ಜಿಲ್ಲಾ ಚುನಾಯಿತ ಪ್ರತಿನಿಧಿ ಗುರುರಾಜ ಎನ್. ಜೋಶಿ 9986680835 ಅವರನ್ನು ಸಂಪರ್ಕಿಸಬೇಕು ಎಂದು ಪ್ರಕಟಣೆ ಕೋರಿದೆ. ಹೆಚ್ಚಿನ ಮಾಹಿತಿಗಾಗಿ: ಗುರುರಾಜ ಎನ್. ಜೋಶಿ 9986680835 ಅವರನ್ನು ಸಂಪರ್ಕಿಸಬಹುದು.

ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ

ಅರಣ್ಯದ ರಕ್ಷಣೆ ಎಲ್ಲರ ಜವಾಬ್ದಾರಿ

ಧಾರವಾಡ: ದೇಶದ ಅಭಿವೃದ್ಧಿಗೆ ಅಗತ್ಯವಿರುವ ನೈಸರ್ಗಿಕ ಸಂಪನ್ಮೂಲಗಳು ಮತ್ತು ದೇಶದ ನಾಗರಿಕರಿಗೆ ಉತ್ತಮ ಆರೋಗ್ಯ, ಜೀವನ ಲಭಿಸಲು ಅರಣ್ಯ ಸಂಪತ್ತು ಮುಖ್ಯವಾಗಿದೆ. ವನ್ಯಜೀವಿಗಳ ಅರಣ್ಯ ಅಸರೆ ಆಗಿದೆ. ಇದರ ರಕ್ಷಣೆ ಮಾಡುವುದು ಬರೀ ಅರಣ್ಯ ಇಲಾಖೆಯ ಜವಾಬ್ದಾರಿಯಲ್ಲ, ದೇಶದ ಎಲ್ಲ ನಾಗರಿಕರಿಗೂ ಅರಣ್ಯ ರಕ್ಷಣೆ ಮಾಡಬೇಕು ಎಂದು ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಬಿ.ಎಸ್.ಭಾರತಿ ಅವರು ಹೇಳಿದರು.

ಅವರು ಗುರುವಾರ ಬೆಳಿಗ್ಗೆ ಕರ್ನಾಟಕ ಅರಣ್ಯ ಇಲಾಖೆ ಧಾರವಾಡ ವೃತ್ತದ ಧಾರವಾಡ ಅರಣ್ಯ ಸಂಕೀರ್ಣ ಆವರಣದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಮಾತನಾಡಿದರು. ವನ್ಯಜೀವಿಗಳ ಸಂರಕ್ಷಣೆ, ಅರಣ್ಯ ರಕ್ಷಣೆಗೆ ಎಲ್ಲರೂ ಬದ್ಧರಾಗಿರಬೇಕು. ಉತ್ತಮ ಗಾಳಿ, ನೀರು, ಫಲವತ್ತಾದ ಮಣ್ಣು ಸಿಗಲು ನಾವು ಗಿಡಮರಗಳನ್ನು, ಪ್ರಾಣಿ, ಪಕ್ಷಿಗಳನ್ನು ಕಾಪಾಡಬೇಕು ಎಂದರು. ಹುತಾತ್ಮರ ದಿನ ಸ್ಮರಣೀಯವಾದ್ದು, ಹುತಾತ್ಮರ ತ್ಯಾಗ ಬಲಿದಾನಗಳನ್ನು ನಾವು ಗೌರವಿಸಬೇಕು. ಅವರ ಕುಟುಂಬ ಸದಸ್ಯರೊಂದಿಗೆ ನಾವು ಇರಬೇಕು ಎಂದರು. ಕಳೆದ 60 ವರ್ಷಗಳಲ್ಲಿ ಅರಣ್ಯ

ಇಲಾಖೆಯಲ್ಲಿ ಕರ್ತವ್ಯನಿರತ ವಿವಿಧ ಹಂತದ ಸುಮಾರು 62 ಜನ ಅಧಿಕಾರಿ, ಸಿಬ್ಬಂದಿಗಳು ಹುತಾತ್ಮರಾಗಿದ್ದಾರೆ. ಅವರಿಗೆ ನನ್ನ ಗೌರವಪೂರ್ವಕ ವಂದನೆಗಳು ಎಂದು ಪಿಡಿಜೆ ಬಿ.ಎಸ್.ಭಾರತಿ ಅವರು ತಿಳಿಸಿದರು.

ಧಾರವಾಡ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಿ. ಯತೀಶಕುಮಾರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಮಾತನಾಡಿದರು. ಉಪ ಅರಣ್ಯ ಸಂರಕ್ಷಣಾಧಿಕಾರಿ ವಿವೇಕ ಕವರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಲಯ ಅರಣ್ಯಾಧಿಕಾರಿ ಕಿರಣಕುಮಾರ ಕರತಂಗಿ ಅವರು ಹುತಾತ್ಮರ ವಿವರ ವಾಚಿಸಿ, ಅವರ ಸೇವೆ ಸ್ಮರಿಸಿದರು. ಶಿಕ್ಷಕಿ ಮೀನಾಕ್ಷಿ ಹಿರೇಮಠ ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ನಿವೃತ್ತ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಪಿ.ಬಿ.ಮಂಜುನಾಥ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಪಿ.ಎಸ್.ವರೂರ, ಅಶೋಕ ಗೊಂಡೆ, ಡಾ.ಶಿವಕುಮಾರ, ಸುರೇಶ ತೇಲಿ, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಸ್.ಎಂ.ಹಿರೇಮಠ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ವಿ.ಎಚ್.ಪರಿಮಳಾ, ಅರಣ್ಯ ವ್ಯವಸ್ಥಾಪನಾಧಿಕಾರಿ ಎ.ಎ.ಇಳಕಲ್ಲ ಹಾಗೂ ಅರಣ್ಯ ಇಲಾಖೆ ವಿವಿಧ ವೃಂದಗಳ ಪರವಾಗಿ ಇ.ಕೆ.ಗಣೇಶ್ವರ, ವಿನೋದಕುಮಾರ, ಆಶಾಲತಾ ಶಟ್ಟಿ, ಶ್ರೀಶೈಲ ಕಿತ್ತೂರ, ಶಿವಪ್ರಸಾದ, ಬಸಪ್ಪ ಕರಡಿ, ದಕ್ಷೀತ ರವಿ ರಾಠೋಡ, ವಿ.ಡಿ.ಲಮಾಣಿ, ರಮೇಶ ಕೊಲ್ಕರ, ಎಂ.ಸಿ.ಕಮ್ಮಾರ ಅವರು ಕರ್ನಾಟಕ ಅರಣ್ಯ ಹುತಾತ್ಮರ ಸ್ತೂಪಕ್ಕೆ ರೀತ–ಗೌರವ ಪುಷ್ಪಗುಚ್ಚ ಸಮರ್ಪಣೆ ಮಾಡಿದರು. ಪೊಲೀಸ್ ಸಿಬ್ಬಂದಿಯಿಂದ ಹುತಾತ್ಮರ ಗೌರವ ಸೂಚಕವಾಗಿ ಮೂರು ಸುತ್ತು ಗುಂಡು ಹಾರಿಸಿ, ಗೌರವ ಸೂಚಿಸಿದರು. ನಂತರ ಎರಡು ನಿಮಿಷ ಮೌನ ಆಚರಿಸಲಾಯಿತು. ಪರೇಡ್ ಕಮಾಂಡರ್ ಅವರ ನೇತೃತ್ವದಲ್ಲಿ ಪೊಲೀಸ್ ಪಡೆ, ವಾದ್ಯವೃಂದ ಗೌರವ ಸಲ್ಲಿಸಿತು.

ಅರ್ಜಿ ಆಹ್ವಾನ

ವಿಜಯಪುರ: ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಯೋಗದಲ್ಲಿ ಬೆಂಗಳೂರಿನ ಕೌಶಲಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಪ್ರಾಯೋಜಿಸಿದ ಉದ್ಯಮಶೀಲತಾಭಿವೃದ್ಧಿಯ ಕುರಿತು 10 ದಿನಗಳ ತರಬೇತಿ ಕಾರ್ಯಕ್ರಮಕ್ಕೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಂದ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿಯಲ್ಲಿ ಉದ್ಯಮದ ಆಯ್ಕೆ, ಮಾರುಕಟ್ಟೆ ಸಮೀಕ್ಷೆ, ಕೈಗಾರಿಕಾ ಇಲಾಖೆಯ ಯೋಜನೆಗಳು, ಬ್ಯಾಂಕಿಂಗ್ ಯೋಜನೆಗಳನ್ನು ಪ್ರಸ್ತುತಪಡಿಸುವ ವಿಧಾನ, ಬಿಸಿನೆಸ್ ಪ್ಲ್ಯಾನ್, ಜಿಎಸ್ಟಿ, ಲೆಕ್ಕಶಾಸ್ತ್ರಗಳ ಕುರಿತು ಮಾಹಿತಿ ನೀಡಲಾಗುವುದು. ಆಸಕ್ತರು ಸೆಪ್ಟೆಂಬರ್ 19ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ 8884184439, 8762483478 ಸಂಪರ್ಕಿಸಬಹುದಾಗಿದೆ.

ಸೆ.20ರಂದು ವಿದ್ಯಾರ್ಥಿಗಳಿಗಾಗಿ ಮ್ಯಾರಥಾನ್ ಸ್ಪರ್ಧೆ

ಕೊಪ್ಪಳ: ನ್ಯಾಕೋ ಅವರ ಮಾರ್ಗಸೂಚಿಯಂತೆ ಹೆಚ್.ಐ.ವಿ./ಏಡ್ಸ್ ,ಕುರಿತು, ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ ಮತ್ತು ತಾರತಮ್ಯವನ್ನು ತಡೆಗಟ್ಟುವುದು, ಹೆಚ್.ಐ.ವಿ. ಮತ್ತು ಏಡ್ಸ್ (ತಡೆ) ಕಾಯ್ದೆ 2017, ಓಂಅಟಿ ಂಖಅಐ ಂಕಕ, , ಉಚಿತ ರಾಷ್ಟ್ರೀಯ ಸಹಾಯವಾಣಿ 1097, ಎಸ್ಟಿಐ, ಇತ್ಯಾದಿ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಅರಿವು ಮೂಡಿಸಲಾಗುತ್ತಿದ್ದು, ಅದರ ಅಂಗವಾಗಿ ಜಿಲ್ಲಾ, ರಾಜ್ಯ, ಪ್ರಾದೇಶಿಕ ಹಾಗೂ ರಾಷ್ಟ್ರಮಟ್ಟದಲ್ಲಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದೆ.

ಅದರಂತೆ ಜಿಲ್ಲೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಸೆಪ್ಟೆಂಬರ್ 20 ರಂದು ಬೆಳಿಗ್ಗೆ 7.30 ಗಂಟೆಗೆ ಜಿಲ್ಲಾಡಳಿತ ಭವನದಿಂದ ಜಿಲ್ಲಾ ಕ್ರೀಡಾಂಗಣದವರೆಗೆ 5 ಕಿ.ಮೀ ಮ್ಯಾರಥಾನ್ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಸ್ಪರ್ಧೆಯಲ್ಲಿ 17–25 ವರ್ಷದ ಕಾಲೇಜು ವಿದ್ಯಾರ್ಥಿಗಳು ಮಾತ್ರ ಭಾಗವಹಿಸಬೇಕು. ಮ್ಯಾರಥಾನ್ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಮೊದಲ ಬಹುಮಾನ ರೂ.5,000/–, ದ್ವಿತೀಯ ಬಹುಮಾನ ರೂ.3,500/– ಹಾಗೂ ತೃತೀಯ ಬಹುಮಾನ ರೂ.2,500/– ಗಳನ್ನು ನೀಡಲಾಗುವುದು.

ಸ್ಪರ್ಧೆಯಲ್ಲಿ ವಿಜೇತರಾದ ಮೊದಲನೇ ಬಹುಮಾನ ಪಡೆದ ವಿದ್ಯಾರ್ಥಿಗಳು ರಾಜ್ಯ ಮಟ್ಟದ ಸ್ಪರ್ಧೆಗೆ ಭಾಗವಹಿಸಬೇಕಾಗಿರುತ್ತದೆ. ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನವನ್ನು ಪಿ.ಎಫ್. ಎಂ.ಎಸ್. ಮುಖಾಂತರ ನೇರವಾಗಿ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುವುದು. ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಕಾಲೇಜಿನ ಗುರುತಿನ ಚೀಟಿ, ಆಧಾರ್ಕಾರ್ಡ್ ಹಾಗೂ ಕಾಲೇಜಿನ ಪ್ರಾಂಶುಪಾಲರ ಧೃಢೀಕರಣ ಪತ್ರಗಳೊಂದಿಗೆ ಹಾಜರಾಗಬೇಕು. ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ದೈಹಿಕ ಆರೋಗ್ಯ ಅರ್ಹತಾ (Fitness Certificate) ಪ್ರಮಾಣಪತ್ರವನ್ನು ಕಡ್ಡಾಯವಾಗಿ ತರಬೇಕು. ತಪ್ಪಿದಲ್ಲಿ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದಿಲ್ಲ. ನಿರ್ಣಾಯಕರ ತೀರ್ಮಾನವೇ ಅಂತಿಮವಾಗಿರುವುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 9449846981, 9481732070 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್

ಸೆ.16ರಂದು ವಿದ್ಯುತ್ ಗ್ರಾಹಕರ ಸಭೆ

ಕೊಪ್ಪಳ: ಕೊಪ್ಪಳ ಜೆಸ್ಕಾಂ ವ್ಯಾಪ್ತಿಯ ಇ.ಎಚ್.ಟಿ., ಹೆಚ್.ಟಿ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆಯನ್ನು ಸೆ. 16 ರಂದು ಬೆಳಗ್ಗೆ 11 ಗಂಟೆಗೆ ನಗರದ ಕಾರ್ಯ ಮತ್ತು ಪಾಲನಾ ವೃತ್ತ ಕಚೇರಿಯಲ್ಲಿ ಆಯೋಜಿಸಲಾಗಿದೆ. ಸಭೆಯ ಅಧ್ಯಕ್ಷತೆಯನ್ನು ಕಾರ್ಯ ಮತ್ತು ಪಾಲನಾ ವೃತ್ತ ಕಛೇರಿಯ ಅಧೀಕ್ಷಕ ಅಭಿಯಂತರರು ವಹಿಸಲಿದ್ದು, ಸಂಬಂಧಿಸಿದ ಇ.ಹೆಚ್.ಟಿ., ಹೆಚ್.ಟಿ ವಿದ್ಯುತ್ ಗ್ರಾಹಕರು ಸಭೆಗೆ ಹಾಜರಾಗಿ, ಸದುಪಯೋಗ ಪಡೆದುಕೊಳ್ಳಬೇಕು ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನಾ ಕೊಪ್ಪಳ ವೃತ್ತದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.18ರಂದು ವಾಕ್ ಇನ್ ಇಂಟರ್‌ವ್ಯೂವ್

ಕೊಪ್ಪಳ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ವಾಕ್ ಇನ್ ಇಂಟರ್‌ವ್ಯೂವ್ ಅನ್ನು ಸೆಪ್ಟೆಂಬರ್ 18 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30ರ ವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಈ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಖಾಸಗಿ ಸಂಸ್ಥೆಗಳು ತಮ್ಮಲ್ಲಿನ ಖಾಲಿ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ. 18 ರಿಂದ 35 ವರ್ಷದೊಳಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ., ಐ.ಐ.ಟಿ., ಡಿಪ್ಲೊಮಾ, ಡಿ.ಎಡ್, ಬಿ.ಎಡ್, ಬಿಇ ಹಾಗೂ ಇತರೆ ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳ 3 ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.17ರಂದು ಧ್ವಜಾರೋಹಣ ಕಾರ್ಯಕ್ರಮ

ಕೊಪ್ಪಳ: 78ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ಸೆಪ್ಟೆಂಬರ್ 17 ರಂದು ಬೆಳಗ್ಗೆ 8.15 ಗಂಟೆಗೆ ನಗರಸಭೆ ಕಾರ್ಯಾಲಯದ ಆವರಣದಲ್ಲಿ ಧ್ವಜಾರೋಹಣ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಅವರು ಧ್ವಜಾರೋಹಣ ನೆರವೇರಿಸುವರು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಲೆಮಚ್ಚೆ ರೋಗ ನಿರ್ವಹಣೆಗೆ ಸಲಹೆ

ಕೊಪ್ಪಳ: ಭತ್ತದಲ್ಲಿ ದುಂಡಾಣು ಎಲೆಮಚ್ಚೆ ರೋಗ ನಿರ್ವಹಣೆಗಾಗಿ ಕೃಷಿ ಇಲಾಖೆಯಿಂದ ರೈತರಿಗೆ ಕೆಲವು ಸಲಹೆಗಳನ್ನು ನೀಡಲಾಗಿದೆ.

ನಿರಂತರ ಮಳೆ ಜತೆಗೆ ಹವಾಮಾನ ವೈಪರೀತ್ಯದಿಂದ ಮುಂಗಾರು ಭತ್ತದ ಬೆಳೆಗೆ ದುಂಡಾಣು ಅಂಗಮಾರಿ ಮಚ್ಚೆ ರೋಗ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ರೈತರಿಗೆ 'ಪ್ರಸ್ತುತ ರೋಗದ ಚಿಹ್ನೆ ಪ್ರಾರಂಭಿಕ ಹಂತದಲ್ಲಿ ಭತ್ತದ ಎಲೆಗಳ ಮೇಲೆ ತೇವಯುಕ್ತ ಕಂದುಬಣ್ಣದ ಗೆರೆಗಳು ಕಂಡುಬಂದಿದ್ದು, ಕಾಲಕ್ರಮೇಣ ಎಲೆಗಳ ಗೆರೆಗಳು ಹಳದಿಯಾಗಿ ರೋಗ ತೀವ್ರತೆಯಾದಾಗ ಸಂಪೂರ್ಣ ಸುಟ್ಟಂತೆ ಕಾಣುತ್ತದೆ. ಈ ರೋಗ ಹತೋಟಿಗೆ ಲೀಟರ್ ನೀರಿಗೆ ಬ್ಯಾಕ್ಟೇರಿಯನಾಶಕ 0.5 ಗ್ರಾಂ ಮತ್ತು ತಾಮ್ರದ ಆಕ್ಸಿಕ್ಲೋರೈಡ್ 2.5 ಗ್ರಾಂ ಮಿಶ್ರಣ ಮಾಡಿ, ಅಂಟು ದ್ರಾವಣ ಸೇರಿಸಿ ಸಿಂಪರಣೆ ಮಾಡಬೇಕು. ರೋಗ ಹೆಚ್ಚಾದಲ್ಲಿ ಲೀಟರ್ ನೀರಿಗೆ ಸ್ಟೆಪ್ಟೋಸೈಕ್ಲಿನ್ ಸಲ್ಫೇಟ್ 0.5 ಗ್ರಾಂ ಮತ್ತು ತಾಮ್ರದ ಆಕ್ಸಿಕ್ಲೋರೈಡ್ 2.5ಗ್ರಾಂ (ಸಿಒಸಿ) ಸಿಂಪರಣೆ ಮಾಡಬೇಕು. ತೆನೆ ಬಿಚ್ಚುವ, ಹಾಲು ತುಂಬುವ ಹಂತದಲ್ಲಿರುವ ಬೆಳೆಗೆ ಲೀಟರ್ ನೀರಿಗೆ ಸ್ಟೆಪ್ಟೋಸೈಕ್ಲಿನ್ ಸಟ್ 0.5 ಗ್ರಾಂ ಮತ್ತು ಕಾರ್ಬೆಂಡಜಿಮ್ 1 ಗ್ರಾಂ ದ್ರಾವಣ ಬೆರೆಸಿ ಎಕರೆಗೆ 180ರಿಂದ 200 ಲೀಟರ್ ಸಿಂಪಡಣೆ ದ್ರಾವಣವನ್ನು ಉಪಯೋಗಿಸಿ ಚೆನ್ನಾಗಿ ತೋಯುವಂತೆ ಸಿಂಪಡಣೆ ಮಾಡಬೇಕು. ಎರಡನೇ ಹಂತದಲ್ಲಿ ಲಘು ಪೋಷಕಾಂಶ ಮಿಶ್ರಣವನ್ನು ಪ್ರತಿ ಲೀಟರ್ ನೀರಿಗೆ ಮೂರು ಗ್ರಾಂ ದ್ರಾವಣ ಬೆರೆಸಿ ಸಿಂಪರಣೆ ಮಾಡುವುದರಿಂದ ರೋಗನಿರೋಧಕ ಶಕ್ತಿ ಹೆಚ್ಚುತ್ತದೆ. ಅಲ್ಲದೆ, ಕುಂಠಿತವಾಗಿರುವ ಭತ್ತದ ಬೆಳೆ ಪುನಶ್ಚೇತನಗೊಳಿಸಲು ಸಹಾಯವಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು, ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಅಥವಾ ಗಂಗಾವತಿಯ ಐ.ಸಿ.ಎ.ಆರ್-ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಭೌತಿಕ ಪರಿಶೀಲನೆಗೆ ಮನವಿ

ಬೆಳಗಾವಿ: ಸರ್ಕಾರದ 5ನೇ ಗ್ಯಾರಂಟಿ ಯೋಜನೆಯಾದ "ಯುವನಿಧಿ ಯೋಜನೆ" ಯು 2024 ಮತ್ತು 2025ನೇ ಸಾಲಿನಲ್ಲಿ ಪಾಸಾದ ಪದವಿ, ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಅಭ್ಯರ್ಥಿಗಳಿಗೆ ಜಾರಿಯಲ್ಲಿದೆ.ಸದರಿ 2025ನೇ ಸಾಲಿನಲ್ಲಿ ಪಾಸಾದ ಅಭ್ಯರ್ಥಿಗಳ ನೋಂದಣಿ ಪ್ರಕ್ರಿಯೆಯು ಪ್ರಾರಂಭವಾಗಿದ್ದು, ನೋಂದಾಯಿಸಿಕೊಂಡ ಅಭ್ಯರ್ಥಿಗಳು ತಾವು ಪಾಸಾದ ದಿನಾಂಕದಿಂದ 180 ದಿನಗಳ ಕಾಲ ನಿರುದ್ಯೋಗಿಯಾಗಿದ್ದರೆ ಮಾತ್ರ ಈ ಯೋಜನೆಯು ಅನ್ವಯಿಸುತ್ತದೆ. ಅಭ್ಯರ್ಥಿಗಳು ತಮ್ಮ ಸೇವಾಸಿಂಧು ಪೋರ್ಟಲ್‌ನಲ್ಲಿ ಅಥವಾ ಸೇವಾಸಿಂಧು, ಕರ್ನಾಟಕ ಒನ್, ಹಾಗೂ ಬಾಪೂಜಿ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ತಮ್ಮ ಅರ್ಜಿಯ ಸ್ಥಿತಿಯನ್ನು ಪರೀಶಿಲಿಸಿ, ಯಾವ ಕಚೇರಿಯಲ್ಲಿ ಭೌತಿಕ ಪರೀಶಿಲನೆಗೆ ಬಾಕಿ ಇದೆ ಎಂಬುದನ್ನು ಖಾತ್ರಿ ಪಡಿಸಿಕೊಂಡು (ಡಿಡಿಪಿಐ, ಡಿಡಿಪಿಯು, ಡಿಇಇಓ) ಆಯಾ ಕಚೇರಿಗಳಿಗೆ ತಮ್ಮ ದಾಖಲಾತಿಗಳ ಪ್ರತಿಯನ್ನು ತೆಗೆದುಕೊಂಡು ಹೋಗಿ ಪರೀಶಿಲನೆ ಮಾಡಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಬೆಳಗಾವಿ, ದೂರವಾಣಿ ಸಂಖ್ಯೆ: 0831-2443948 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕರು, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗದಗನಲ್ಲಿ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ

ಅರಣ್ಯ ಸಂರಕ್ಷಕರು ನಾಡಿನ ಹಸಿರಿನ ಹರಿಕಾರರು: ನ್ಯಾ. ಗಂಗಾದರ

ಗದಗ: ನಾಡಿನ ಹಸಿರಿನ ನಿಜವಾದ ಹರಿಕಾರರು ಅರಣ್ಯ ಸಂರಕ್ಷಕರು ಎಂದು ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗಂಗಾದರ ಎಂ.ಸಿ ಅವರು ಹೇಳಿದರು.

ಗದಗ ತಾಲೂಕಿನ ಬಿಂಕದಕಟ್ಟಿಯಲ್ಲಿ ಗುರುವಾರ ಅರಣ್ಯ ಇಲಾಖೆಯಿಂದ ಸಾಲು ಮರದ ತಿಮ್ಮಕ್ಕ ಸಸ್ಯೋದ್ಯಾನದಲ್ಲಿ ಜರುಗಿದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ನಾಡಿನ ಅರಣ್ಯ ಸಂಪತ್ತನ್ನು ರಕ್ಷಿಸಲು ಪ್ರಾಣ ತ್ಯಾಗ ಮಾಡಿದ ಕರ್ನಾಟಕ ಅರಣ್ಯ ಇಲಾಖೆ ಹುತಾತ್ಮರಿಗೆ ಶ್ರದ್ಧಾಂಜಲಿ ಸಲ್ಲಿಸುತ್ತಾ ಅವರ ತ್ಯಾಗ ಬಲಿದಾನ ನಾವೆಲ್ಲರೂ ನೆನೆಯುವ ಮೂಲಕ ಅರಣ್ಯ ಸಂರಕ್ಷಣೆಗೆ ಶ್ರಮಿಸಿದ ಸರ್ವರಿಗೂ ಆಭಾರಿಗಳಾಗಿರೋಣ ಎಂದರು.

ಅರಣ್ಯ ಸಂರಕ್ಷಣೆಯಲ್ಲಿ ಹುತಾತ್ಮರಾದವರ ತ್ಯಾಗ ಬಲಿದಾನ ರಾಷ್ಟ್ರಕ್ಕೆ ಆದ ನಷ್ಟ. ನೈಸರ್ಗಿಕ ಸಂಪತ್ತು ರಕ್ಷಣೆ ಕಾರ್ಯ ನಮ್ಮೆಲ್ಲರದ್ದು. ಪ್ರಕೃತಿ ಇಂದು ನಮಗೆಲ್ಲ ಶುದ್ಧ, ಸುಂದರ ವಾತಾವರಣ ಕಲ್ಪಿಸಿದೆ. ಇದರ ರಕ್ಷಣೆಯಲ್ಲಿ ಇಲಾಖೆಯ ಅಧಿಕಾರಿ ಸಿಬ್ಬಂದಿಗಳ ಶ್ರಮ ಅಪಾರವಾಗಿದೆ ಎಂದು ಅಭಿಪ್ರಾಯ ಪಟ್ಟರು.

ಇಂದು ಹುತಾತ್ಮರನ್ನು ಕೇವಲ ಸ್ಮರಿಸುವ ದಿನವಲ್ಲ. ಜೊತೆಗೆ ನಾವೆಲ್ಲರೂ ಪರಿಸರ ಸಂರಕ್ಷಣೆ ಹೊಣೆ ಹೊರುವ ದಿನ ಎಂದು ನಮ್ಮ ಕರ್ತವ್ಯಗಳ ಕುರಿತು ತಿಳಿಸಿದರು. ನಿರಂತರವಾಗಿ ನಡೆಯುವ ಅಕ್ರಮ ಪ್ರಾಣಿ ಬೇಟಿ ತಡೆಯಬೇಕು. ಪ್ರಕೃತಿಯಲ್ಲಿನ ಒಂದಿಲ್ಲೊಂದು ಲಾಭ ಪಡೆಯುವ ನಾವೆಲ್ಲರೂ ಪ್ರಕೃತಿ ಸಂರಕ್ಷಣೆ ಮಾಡುವ ಹೊಣೆಗಾರಿಕೆ ನಿರ್ವಹಿಸೋಣ ಎಂದರು.

ಕೋವಿಡ್ ವೇಳೆ ಅದೆಷ್ಟೋ ಜನರು ಆಕ್ಸಿಜನ್ ಕೊರತೆಯಿಂದ ಅಸು ನೀಗಿದರು. ಅಂದೇ ನಮಗೆಲ್ಲ ಅರಿವಾದದ್ದು ಶುದ್ಧ ಗಾಳಿಯ ಬೆಲೆ ಅಧಿಕವಾಗಿದೆ ಎಂದು. ಉತ್ತಮ ಪ್ರಕೃತಿಯನ್ನು ಮಲಿನಗೊಳಿಸದೇ ಮುಂದಿನ ಭವಿಷ್ಯಕ್ಕೆ ಮೀಸಲಿಡುವ ಗುರುತರ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು.

ಪ್ರಕೃತಿಯಲ್ಲಿನ ಇಂತಹ ಶುದ್ಧ ಗಾಳಿ ನಮಗೆಲ್ಲ ಉಚಿತವಾಗಿ ದೊರೆಯುತ್ತದೆ. ಈ ಪ್ರಕೃತಿಯ ಋಣ ತೀರಿಸುವ ಕಾರ್ಯವನ್ನು ನಾವೆಲ್ಲರೂ ಮಾಡಬೇಕಿದೆ. ಪ್ರಕೃತಿ ನಮಗೆ ಉಚಿತವಾಗಿ ಆಹಾರ ಶುದ್ಧ ಗಾಳಿ ವಾತಾವರಣ ನೀಡುತ್ತಿದೆ. ಅದನ್ನು ಉಳಿಸಿ ಬೆಳೆಸುವ ಮಹತ್ತರ ಕಾರ್ಯಕ್ಕೆ ನಾವೆಲ್ಲರೂ ಮುಂದಾಗೋಣ ಎಂದರು. ದೇಶ ಹಾಗೂ ರಾಜ್ಯದಲ್ಲಿ ಅರಣ್ಯ ಸಂರಕ್ಷಣೆಯಲ್ಲಿ ತೊಡಗಿದ ಹಲವರು ಪ್ರಾಣತ್ಯಾಗ ಬಲಿದಾನ ಮಾಡಿದ್ದಾರೆ. ಅವರೆಲ್ಲರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಎಂದು ನ್ಯಾ. ಗಂಗಾದರ ಎಂ.ಸಿ ತಿಳಿಸಿದರು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅತಿಥಿಯಾಗಿ ಭಾಗವಹಿಸಿ ಮಾತನಾಡಿ ನಾವಿಂದು ಪರಿಸರ ಬದಲಾವಣೆಯಿಂದಾಗುವ ಆಗುವ ಅನಾಹುತಗಳನ್ನು ಎದುರಿಸುತ್ತಿದ್ದೇವೆ. ಪರಿಸರ ಸಂರಕ್ಷಣೆಯ ಕಾಳಜಿ ಹೊಣೆಗಾರಿಕೆಯನ್ನು ನಿಭಾಯಿಸುತ್ತಿಲ್ಲ. ಮನುಷ್ಯನನ್ನು ಬಿಟ್ಟು ಎಲ್ಲವನ್ನೂ ಸಹ ಪರಿಸರವೆಂದು ಪರಿಗಣಿತವಾಗುತ್ತದೆ. ಅಂತಹ ಪರಿಸರದ ಮೇಲೆ ಮಾನವನ ಅತಿಯಾದ ದುರಾಸೆಯಿಂದಾಗಿ ಹಾನಿ ಮಾಡುತ್ತಾ ಪ್ರಕೃತಿ ಅಸಮತೋಲನಕ್ಕೆ ಕಾರಣರಾಗಿದ್ದೇವೆ.

ಮನುಷ್ಯನ ಅಗತ್ಯತೆಗಳು ಅಗಾಧವಾಗಿ ಪರಿಸರ ಸಂಪತ್ತು ವಿನಾಶದತ್ತ ಸಾಗಿದೆ. ಅರಣ್ಯ ಹುತಾತ್ಮರು ಪ್ರಾಣಿಗಳಿಂದ ಆದವರು ಕಡಿಮೆ. ಮನುಷ್ಯರಿಂದಲೇ ಹತ್ಯೆಯಾದವರ ಸಂಖ್ಯೆ ಅಧಿಕವಾಗಿದೆ. ಪರಿಸರ ಸಂರಕ್ಷಣೆಯೊಂದಿಗೆ ನಾಳಿನ ಭವಿಷ್ಯದ ಪೀಳಿಗೆಗೆ ಉತ್ತಮ ಪ್ರಕೃತಿ ನೀಡುವ ವಾಗ್ದಾನ ನಮ್ಮದಾಗಲಿ ಎಂದು ನುಡಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಕೆಂಚಪ್ಪನವರ ಮಾತನಾಡಿ ನಮ್ಮ ಉತ್ತಮ ಭವಿಷ್ಯಕ್ಕಾಗಿ ತಮ್ಮ ತ್ಯಾಗ ಬಲಿದಾನದ ಮೂಲಕ ಅರಣ್ಯ ಸಂರಕ್ಷಣೆ ಮಾಡಿದವರನ್ನು ನೆನೆಯೋಣ. ಅರಣ್ಯ ಸಂಪತ್ತು ಕೇವಲ ಮರಗಳು, ಪ್ರಾಣಿಗಳಷ್ಟೇ ಅಲ್ಲ. ಅರಣ್ಯ ಇಲ್ಲದೇ ಮಳೆಯೂ ಇಲ್ಲ. ಜೀವವೂ ಇಲ್ಲ. ಜೀವನವೂ ಇಲ್ಲ ಎಂಬುದನ್ನು ನಾವೆಲ್ಲರೂ ಅರಿತು ಸಂರಕ್ಷಣೆ ಕಾರ್ಯದಲ್ಲಿ ನಮ್ಮದೇ ಆದ ಕೊಡುಗೆ ನೀಡೋಣ ಎಂದರು. ಅರಣ್ಯ ಸಂರಕ್ಷಣೆಯಲ್ಲಿ ಅನೇಕರ ತ್ಯಾಗ ಬಲಿದಾನ ಸಮರ್ಪಣಾ ಮನೋಭಾವದಿಂದಾಗಿ ಇಂದು ಅರಣ್ಯಗಳು ಜೀವಂತವಾಗಿವೆ. ಅದಕ್ಕಾಗಿಯೇ ನಾವೆಲ್ಲರೂ ಜೀವಂತವಾಗಿದ್ದೇವೆ ಎಂಬುದನ್ನು ಮರೆಯಬಾರದು.

ರಾಜ್ಯದಲ್ಲಿ 1966 ರಿಂದ ಈವರೆಗೆ ಅರಣ್ಯ ಇಲಾಖೆಯಲ್ಲಿ ಕರ್ತವ್ಯ ನಿರತರಾಗಿದ್ದ 62 ನೌಕರರು ಹುತಾತ್ಮರಾಗಿದ್ದು ಅವರೆಲ್ಲರ ಆತ್ಮಕ್ಕೆ ಚಿರಶಾಂತಿಯನ್ನು ನೀಡಲಿ. ಬಿಂಕದಕಟ್ಟಿಯಲ್ಲಿ ಅರಣ್ಯ ಹುತಾತ್ಮರ ಸ್ಮಾರಕ ನಿರ್ಮಾಣಕ್ಕೆ ಶ್ರಮಿಸಿದ ಎಲ್ಲರಿಗೂ ಧನ್ಯವಾದಗಳನ್ನು ತಿಳಿಸಿದರು. ಅರಣ್ಯ ಇಲಾಖೆಯಲ್ಲಿ ಕರ್ತವ್ಯ ನಿರತರಾಗಿದ್ದಾಗ ಹುತಾತ್ಮರಾದವರಿಗೆ ಆತ್ಮಕ್ಕೆ ಚಿರಶಾಂತಿ ನೀಡಲಿ ಎಂದು ಮೌನಾಚರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ ವರಿಷ್ಠಾಧಿಕಾರಿ ಮಹಾಂತೇಶ ಸಜ್ಜನರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಸಾಮಾಜಿಕ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಚಂದ್ರಹಾಸ ವರ್ಣೇಕರ್ , ವಾರ್ತಾಧಿಕಾರಿ ವಸಂತ ಮಡ್ಡೂರ, ಅರಣ್ಯ ಇಲಾಖೆಯ ಅಧಿಕಾರಿಗಳಾದ ಪ್ರಕಾರ ಪವಾಡಿಗೌಡ್ರ, ಮೇಘನಾ ಎಚ್, ವೀರೇಂದ್ರ ಮರಿಸಬಣ್ಣವರ, ಮಂಜುನಾಥ ಮೇಗಳಮನಿ, ರಾಮಪ್ಪ ಪೂಜಾರ, ಸ್ನೇಹಾ ಕೊಪ್ಪಳ, ವೀರಭದ್ರಪ್ಪ ಕುಂಬಾರ ಅನ್ವರ ಕೊಲ್ಹಾರ ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸ್ಥಾರ್ಥಕ್ಕಾಗಿ ಜಾತಿಗಳ ಮಧ್ಯೆ ಕಲಹ: ಕುಲಕರ್ಣಿ

ಮುದ್ದೇಬಿಹಾಳ: ಸನಾತನ ಧರ್ಮ ಜಗತ್ತಿಗೆ ಆದರ್ಶವಾಗಿದೆ ಆದರೆ ಆಳುವ ಸರಕಾರಗಳು ತಮ್ಮ ಸ್ಥಾರ್ಥಕ್ಕಾಗಿ ಜಾತಿ ಜಾತಿಗಳ ಮಧ್ಯೆ ಕಲಹ ಹಚ್ಚಿ ವಿಭಜಿಸುವ ಕೆಲಸ ಮಾಡುತ್ತಿವೆ ಎಂದು ತಾಲೂಕ ಬ್ರಾಹ್ಮಣ ಸಮಾಜದ ಅಧ್ಯಕ್ಷ ಬಿ.ಪಿ.ಕುಲಕರ್ಣಿ ಹೇಳಿದರು ಅವರು ಗುರುವಾರ ತಾಲೂಕು ಬ್ರಾಹ್ಮಣ ಸಮಾಜದ ವತಿಯಿಂದ ಮುಖ್ಯಮಂತ್ರಿ ಅವರಿಗೆ ತಹಶಿಲ್ದಾರ ಮೂಲಕ ಬ್ರಾಹ್ಮಣ ಸಮಾಜದ ಯಾವುದೇ ರೀತಿಯ ಉಪ ಇರುವುದಿಲ್ಲ ಜಾತಿ ಸಮೀಕ್ಷೆಯಲ್ಲಿ ಬ್ರಾಹ್ಮಣ ಕ್ರಿಶ್ಚಿಯನ್, ಬ್ರಾಹ್ಮಣ ಮುಜಾವರ ಮುಸ್ಲಿಂ, ವ್ಯಾಸ ಬ್ರಾಹ್ಮಣ ಕ್ರಿಶ್ಚಿಯನ್ ನಮೂದಿಸಿದ್ದು ಇದಕ್ಕೆ ಆಕ್ಷೇಪಣೆ ಇದೆ ಎಂದು ಮನವಿ ಸಲ್ಲಿಸಿ ಮಾತನಾಡಿದರು.

ನಮ್ಮ ಬ್ರಾಹ್ಮಣ ಸಮಾಜದಲ್ಲಿ ಹಿಂದೂ ಬ್ರಾಹ್ಮಣ ಅಂತ ಮಾತ್ರವಿದೆ ಜಾತಿ ಸಮೀಕ್ಷೆ ಪಟ್ಟಿಯಲ್ಲಿ ಇಲ್ಲದ ಉಪಜಾತಿಗಳನ್ನು ಸೇರಿಸಲಾಗಿದೆ ಇದನ್ನು ಕೈ ಬಿಡಬೇಕು ಎಲ್ಲಾ ಬ್ರಾಹ್ಮಣ ಸಮಾಜದವರು ಕ್ರಮಸಂಖ್ಯೆ 210 ರಲ್ಲಿ ಹಿಂದೂ ಬ್ರಾಹ್ಮಣವೆಂದು ಬರೆಯಿಸಬೇಕೆಂದರು ಈ ವೇಳೆ ಅರವಿಂದ ಕುಲಕರ್ಣಿ, ಪಿ.ಎನ್ ಕುಲಕರ್ಣಿ, ಪುಟ್ಟು ಕುಲಕರ್ಣಿ ಮಾತನಾಡಿ ಈ ತಿಂಗಳು22 ರಿಂದ ಜಾತಿ ಸಮೀಕ್ಷೆ ಮಾಡಲಾಗುತ್ತಿದೆ ನಮ್ಮ ಸಮಾಜದಲ್ಲಿ ಬ್ರಾಹ್ಮಣ ಕ್ರಿಶ್ಚಿಯನ್ ಬ್ರಾಹ್ಮಣ ಮುಜಾಮವರ ಮುಸ್ಲಿಂ ಅಂತ ಇಲ್ಲ ಇದನ್ನು ಕೈಬಿಡಬೇಕು ಸಮೀಕ್ಷೆಯಲ್ಲಿ ಹಿಂದೂ ಬ್ರಾಹ್ಮಣ ಅಂತ ನಮೂದಿಸಿಬೇಕು ಸರಕಾರಗಳು ಒಡೆದಾಳುವದನ್ನು ಕೈ ಬಿಡಬೇಕು ಎಂದರು.

ಈ ಸಂದರ್ಭದಲ್ಲಿ ಸಮಾಜದ ಉಪಾಧ್ಯಕ್ಷ ಎಲ್ ಎಸ್ ದೇಶಪಾಂಡೆ,ಪಿ ಎಸ್ ಕುಲಕರ್ಣಿ, ಎಂ ಆರ್ ದೇಶಪಾಂಡೆ, ಪಿ ಎಂ ದೇಶಪಾಂಡೆ, ಅನಿಲ್ ಕುಲಕರ್ಣಿ, ಗುರುರಾಜ ಕುಲಕರ್ಣಿ, ಪ್ರದೀಪ ಕುಲಕರ್ಣಿ, ಬಲವಂತರಾಯ ದೇಶಪಾಂಡೆ, ಎಂ ಕೆ ಕುಲಕರ್ಣಿ, ಉಲ್ಲಾಸ ಕುಲಕರ್ಣಿ, ವಾಸು ಸಾಲೋಡಗಿ,ಕೃಷ್ಣ ಕುಲಕರ್ಣಿ, ಆನಂದ ಜಂಬಗಿ ,ಆರ್ ಎನ್ ಜೋಷಿ,ಜಿ ಆರ್ ಕುಲಕರ್ಣಿ, ಸೇರಿದಂತೆ

ದೇವದಾಸಿ ಮಹಿಳೆಯರ ಮರು ಸಮೀಕ್ಷೆಯ ಕುರಿತು ಜಿಲ್ಲಾ ಮಟ್ಟದ ಸಭೆ

ಅಲ್ಪಸಂಖ್ಯಾತರ ಸಮೀಕ್ಷೆ ಅಚ್ಚುಕಟ್ಟಾಗಿ ನಿರ್ವಹಿಸಿ

ಕೊಪ್ಪಳ: ಕೊಪ್ಪಳ ಜಿಲ್ಲೆಯಲ್ಲಿರುವ ಮಾಜಿ ದೇವದಾಸಿ ಮಹಿಳೆಯರು ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಸಮೀಕ್ಷೆಯಿಂದ ಹೊರ ಉಳಿಯದಂತೆ ಸರಿಯಾಗಿ ಹಾಗೂ ನಿಖರವಾದ ಮಾಹಿತಿ ಸಂಗ್ರಹಿಸಿ, ಮಾಜಿ ದೇವದಾಸಿ ಮಹಿಳೆಯರ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆ ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಕೊಪ್ಪಳ ಜಿಲ್ಲಾಧಿಕಾರಿ ಡಾ.ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಗುರುವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಕೊಪ್ಪಳ ಜಿಲ್ಲಾ ಕಛೇರಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯ ಕುರಿತು ಜಿಲ್ಲಾ ಮಟ್ಟದ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೊಪ್ಪಳದಲ್ಲಿನ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆಯನ್ನು ಸೆಪ್ಟೆಂಬರ್ 15 ರಿಂದ 45 ದಿನಗಳ ಅವಧಿಯಲ್ಲಿ ಮಾಡಲಾಗುವುದು. ಅದರ ಜೊತೆಗೆ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯನ್ನು ಸೆ. 15 ರಿಂದ ನಡೆಯಲಿದೆ. ಈ ಸಮೀಕ್ಷೆಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. 1993–94 ಮತ್ತು 2007–08 ರಲ್ಲಿ ದೇವದಾಸಿ ಮಹಿಳೆಯರ ಸಮೀಕ್ಷೆಯನ್ನು ನಡೆಸಿದ್ದು, ಆ ಸಮೀಕ್ಷೆಯಲ್ಲಿ ಮಾಜಿ ದೇವದಾಸಿ ಮಹಿಳೆಯರು ಕೈಬಿಟ್ಟು ಹೋಗಿದ್ದಲ್ಲಿ ಈಗ ನಡೆಯುವ ಮರು ಸಮೀಕ್ಷೆಯಲ್ಲಿ ಸೇರ್ಪಡೆ ಮಾಡಬೇಕು ಎಂದರು.

ಹಿಂದಿನ ಸಮೀಕ್ಷೆಯಲ್ಲಿ ಕೈಬಿಟ್ಟ ಮಾಜಿ ದೇವದಾಸಿ ಮಹಿಳೆಯರು ಮರು ಸಮೀಕ್ಷೆಯಲ್ಲಿ ಸೇರ್ಪಡೆಯಾಗಬೇಕು ಮತ್ತು ಮರಣ ಹೊಂದಿದ ದೇವದಾಸಿ ಮಹಿಳೆಯರ ಕುಟುಂಬದ ಸದಸ್ಯರು ತಾವು ಈ ಸಮೀಕ್ಷೆಯಲ್ಲಿ ಸೇರ್ಪಡೆಯಾಗಲು ಇಚ್ಛಿಸಿದರೆ ನಿಖರ ಮಾಹಿತಿಯನ್ನು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ ಕಛೇರಿಗೆ ನೀಡಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕು. ಕೊಪ್ಪಳದಲ್ಲಿನ ಲಿಂಗತ್ವ ಅಲ್ಪಸಂಖ್ಯಾತರ ಸಮುದಾಯದ ಸದಸ್ಯರು ತಮ್ಮ ಸ್ಪಷ್ಟ ಮತ್ತು ನಿಖರ ಮಾಹಿತಿಯನ್ನು ತಾಲೂಕಾಸ್ತರ್ತೆಗಳಲ್ಲಿ ಅಥವಾ ಜಿಲ್ಲಾಸ್ತರ್ತೆಯಲ್ಲಿ ಭೇಟಿ ನೀಡಿ ಈ ಸಮೀಕ್ಷೆಗೆ ಸಹಕರಿಸಬೇಕು ಎಂದು ಹೇಳಿದರು.

ಈ ಎರಡು ಸಮೀಕ್ಷೆಗಳನ್ನು ಕೊಪ್ಪಳ ಜಿಲ್ಲೆಯಲ್ಲಿ ವ್ಯವಸ್ಥಿತವಾಗಿ ಹಮ್ಮಿಕೊಳ್ಳಲು ಅಗತ್ಯವಿರುವ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪೋಸ್ಟರ್ ಬಿಡುಗಡೆ: ಈ ಸಂದರ್ಭದಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆಯ ಪೋಸ್ಟರ್ ಹಾಗೂ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯ ಪೋಸ್ಟರ್ ಗಳನ್ನು ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ಕೊಪ್ಪಳ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಅಜ್ಜಪ್ಪ ಸೋಗಲದ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಕೊಪ್ಪಳ ಯೋಜನಾಧಿಕಾರಿ ಪೂರ್ಣಿಮಾ ಏಳುಬಾವಿ, ದೇವದಾಸಿ ಮಹಿಳೆಯರ ಮರು ಸಮೀಕ್ಷೆ ರಾಜ್ಯ ಸಮಿತಿ ಸದಸ್ಯರಾದ ಚಂದಾಲಿಂಗಪ್ಪ ಕಲಾಲಬಂಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಲಿಂಗತ್ವ ಅಲ್ಪಸಂಖ್ಯಾತರು ಮತ್ತಿತರರು ಉಪಸ್ಥಿತರಿದ್ದರು.

ಕಲೆ ಕಲಾವಿದರನ್ನು ಉಳಿಸಿ ಬೆಳೆಸಿ

ರಬಕವಿ–ಬನಹಟ್ಟಿ: ಆಧುನಿಕತೆಯ ಇಂದಿನ ದಿನಗಳಲ್ಲಿ ನಾಟಕ ಕಲೆ ಮತ್ತು ಕಲಾವಿದರನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ನಾವೆಲ್ಲರೂ ಗಮನ ನೀಡಬೇಕು. ನಾಟಕಗಳು ಸಮಾಜವನ್ನು ತಿದ್ದುವ ಕಾರ್ಯವನ್ನು ಮಾಡುತ್ತವೆ ಎಂದು ನಗರದ ಸೋಮವಾರ ಪೇಟೆಯ ಸಮಸ್ತ ದೈವ ಮಂಡಳಿಯ ಅಧ್ಯಕ್ಷ ಮಲ್ಲಿಕಾರ್ಜುನ ತುಂಗಳ ತಿಳಿಸಿದರು.

ಅವರು ಗುರುವಾರ ಇಲ್ಲಿನ ಕೆಇಬಿ ಕಾರ್ಯಾಲಯದ ಮುಂಭಾಗದ ನಾಟಕ ಮಂಟಪದಲ್ಲಿ ಹಾನಗಲ್ ಗುರು ಕುಮಾರೇಶ್ವರ ನಾಟ್ಯ ಸಂಘದ ನಾಟಕ ಪ್ರದರ್ಶನದ ಭಿತ್ತಿ ಪತ್ರಗಳನ್ನು ಬಿಡುಗಡೆ ಮಾತನಾಡಿದರು. ಸಂಚಾಲಕ ಶ್ರೀಧರ ಹೆಗ್ಗಡೆ ಗುರುಕುಮಾರೇಶ್ವರ ನಾಟ್ಯ ಸಂಘವು 44 ವರ್ಷಗಳಿಂದ ರಾಜ್ಯಾದ್ಯಾಂತ ಸಂಚರಿಸಿ ನಾಟಕ ಪ್ರದರ್ಶನಗಳನ್ನು ಮಾಡುತ್ತ ಬಂದಿದೆ. ಇಂದು ನಾಟಕ ತಂಡಗಳನ್ನು ಕಟ್ಟಿಕೊಂಡು ಸಂಚರಿಸುವುದು ಕಷ್ಟದ ಕಾರ್ಯವಾಗಿದೆ. ಆದ್ದರಿಂದ ರಬಕವಿ ಬನಹಟ್ಟಿ ಸುತ್ತ ಮುತ್ತಲಿನ ನಗರ ಮತ್ತು ಗ್ರಾಮೀಣ ಪ್ರದೇಶದ ನಾಟಕ ಆಸಕ್ತರು ನಾಟಕವನ್ನು ನೋಡುವುದರ ಮೂಲಕ ಕಲೆ ಮತ್ತು ಕಲಾವಿದರನ್ನು ಪ್ರೋತ್ಸಾಹಿಸಬೇಕು.ನಮ್ಮ ನಾಟಕಗಳು ಸಮಾಜಕ್ಕೆ ಸಂದೇಶ ನೀಡುವ ಮತ್ತು ಕುಟುಂಬ ಸಮೇತವಾಗಿ ನೋಡುವ ನಾಟಕಗಳಾಗಿವೆ. ನಮ್ಮ ತಂಡದಿಂದ ಉತ್ತಮ ಸಾಮಾಜಿಕ ನಾಟಕಗಳು ಪ್ರದರ್ಶನಗೊಳ್ಳಲಿವೆ ಎಂದು ತಿಳಿಸಿದರು.

ನಗರದ ಮುಖಂಡ ಶೇಖರ ಜವಳಗಿ, ನಾಟ್ಯ ಸಂಘದ ಮ್ಯಾನೇಜರ್ ಪಂಚಾಕ್ಷರಿ ಹೂಗಾರ, ಶರತ ಕುಂಬ್ಳೆ, ಕುಮಾರ ಕಲ್ಲೂರ, ಪಂಚಾಕ್ಷರಿ ಕೊಡ್ಲಿ.ವೀರಭದ್ರ ಗೋಕಾಕ, ಭಾರತಿ ದಾವಣಗೇರಿ, ಕಲ್ಪನಾ ಮುಧೋಳ, ಕಾಂಚನಾ ಕಲ್ಲೂರ ಸೇರಿದಂತೆ ಅನೇಕರು ಇದ್ದರು.

ಆರೋಗ್ಯದ ವಿಷಯದಲ್ಲಿ ಕಾಳಜಿ ವಹಿಸಿ: ಛಬ್ಬಿ

ಕಾರವಾರ: ಪ್ರಸ್ತುತ ದಿನಗಳಲ್ಲಿ ಮನುಷ್ಯನಿಗೆ ಭೌತಿಕ ಸಿರಿ ಸಂಪತ್ತಿಗಿಂತ ಆರೋಗ್ಯವೇ ನೈಜ ಆಸ್ತಿಯಾಗಿದ್ದು, ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸದೇ ಅಗತ್ಯ ಕಾಳಜಿ ವಹಿಸಬೇಕು ಎಂದು ಮುಂಡಗೋಡ ತಾಲೂಕು ಪಂಚಾಯತಿಯ ಸಹಾಯಕ ನಿರ್ದೇಶಕ ಸೋಮಲಿಂಗಪ್ಪ ಛಬ್ಬಿ ಹೇಳಿದರು.

ಗುರುವಾರ ನಾಗನೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಿಸುತ್ತಿರುವ ಅರಣ್ಯ ಕಾಮಗಾರಿ ಸ್ಥಳದಲ್ಲಿ ಮುಂಡಗೋಡ ತಾಲೂಕು ಪಂಚಾಯತ್, ನಾಗನೂರು ಗ್ರಾಮ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಲೊಯೋಲಾ ವಿಕಾಸ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಗ್ರಾಮೀಣ ಭಾಗದಲ್ಲಿಯೂ ಸಹ ಕಲಬೆರಕೆಯುಕ್ತ ಮತ್ತು ಕಲುಷಿತ ಆಹಾರ, ಲಯ ತಪ್ಪಿದ ಜೀವನ ಪದ್ಧತಿ, ನಿರ್ಲಕ್ಷ್ಯದ ಕಾರಣದಿಂದಾಗಿ ರೋಗ ರುಜಿನಗಳು ಹೆಚ್ಚಾಗುತ್ತಿವೆ. ಆದ್ದರಿಂದ ಪೌಷ್ಟಿಕ ಮತ್ತು ಸಮತೋಲಿತ ಆಹಾರ, ಸುವ್ಯವಸ್ಥಿತ ಜೀವನ ಕ್ರಮ ಅಳವಡಿಸಿಕೊಳ್ಳುವುದು ಹಾಗೂ ನಿಯಮಿತವಾಗಿ ಆರೋಗ್ಯ ತಪಾಸಣೆಗೆ ಒಳಪಡುವ ಮೂಲಕ ಜಾಗೃತಿ ವಹಿಸುವುದು ಅವಶ್ಯವಾಗಿದೆ. ಆ ನಿಟ್ಟಿನಲ್ಲಿ ಮನರೇಗಾ ಕೂಲಿಕಾರರ ಆರೋಗ್ಯ ಹಿತದೃಷ್ಟಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದ್ದು, ಪ್ರತಿಯೊಬ್ಬರೂ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಐಇಸಿ ಸಂಯೋಜಕ ಕಿರಣ ಜೋತೆಪ್ಪನವರ ಮಾತನಾಡಿ, ಕಾರ್ಯಕ್ರಮದ ಉದ್ದೇಶ, ಮನರೇಗಾ ಯೋಜನೆಯಡಿ ಗ್ರಾಮೀಣ ಭಾಗದ ಜನರಿಗೆ ಲಭ್ಯವಿರುವ ವೈಯಕ್ತಿಕ ಮತ್ತು ಸಮುದಾಯ ಕಾಮಗಾರಿ ಸೌಲಭ್ಯ ಸೇರಿದಂತೆ ಹಲವು ಪ್ರಮುಖ ಮಾಹಿತಿಯನ್ನು ತಿಳಿಸಿದರು.

ಕಲಕೇರಿ ಸಮುದಾಯ ಆರೋಗ್ಯ ಅಧಿಕಾರಿ ವಿರೂಪಾಕ್ಷ ಅವರು ಮಾತನಾಡಿ, ಕಾಮಗಾರಿ ಸ್ಥಳದಲ್ಲಿ ಹಾವು ಕಚ್ಚಿದಾಗ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮ ಮತ್ತು ಪ್ರಾಥಮಿಕ ಚಿಕಿತ್ಸೆ, ರೇಬೀಸ್ ರೋಗಕ್ಕೆ ಚುಚ್ಚುಮದ್ದು ಸೇರಿದಂತೆ ಗ್ರಾಮೀಣ ಜನರಿಗೆ ಉಪಯೋಗವಾಗುವ ಆರೋಗ್ಯ ಸಲಹೆಗಳನ್ನು ನೀಡಿದರು.

ಆರೋಗ್ಯ ಸಿಬ್ಬಂದಿ ಕಾಮಗಾರಿ ಸ್ಥಳದಲ್ಲಿ ಉಪಸ್ಥಿತರಿದ್ದ 80ಕ್ಕೂ ಹೆಚ್ಚು ಕೂಲಿಕಾರರಿಗೆ ಕಣ್ಣಿನ ತಪಾಸಣೆ, ಬಿಪಿ, ಶುಗರ್, ಮಧುಮೇಹ, ರಕ್ತದೊತ್ತಡದಂತಹ ಪ್ರಾಥಮಿಕ ಅನಾರೋಗ್ಯ ಗುಣಲಕ್ಷಣಗಳನ್ನು ಪರಿಶೀಲಿಸಿ, ಸೂಕ್ತ ಸಮಾಲೋಚನೆ ನೀಡಿದರು. ಅಗತ್ಯಾನುಸಾರ ಹೆಚ್ಚಿನ ತಪಾಸಣೆ ಮತ್ತು ಚಿಕಿತ್ಸೆಗೆ ತಾಲೂಕು ಆಸ್ಪತ್ರೆಗೆ ಭೇಟಿ ನೀಡುವಂತೆ ಶಿಫಾರಸ್ಸು ಮಾಡಿದರು.

ಈ ಸಂದರ್ಭದಲ್ಲಿ ಕಾತೂರು ಅಭಿವೃದ್ಧಿ ಅಧಿಕಾರಿ ಬಸವರಾಜ ಕಡಪಟ್ಟಿ, ನಾಗನೂರು ಗ್ರಾಪಂ ಸದಸ್ಯರಾದ ಲಕ್ಷ್ಮೀ ತಳವಾರ, ಯಲ್ಲಪ್ಪ ಭದ್ರಾಪೂರ, ಕಾರ್ಯದರ್ಶಿ ಬಸವರಾಜ ವಡ್ಡರ, ನೇತ್ರ ತಜ್ಞ ವೈದ್ಯಕೀಯ ಸಿಬ್ಬಂದಿ ಭಾಗ್ಯಶ್ರೀ, ಲೊಯೋಲಾ ವಿಕಾಸ ಕೇಂದ್ರದ ಸಿಬ್ಬಂದಿಗಳಾದ ಮಲ್ಲಮ್ಮ, ಶ್ರೀದೇವಿ, ಹಜರತ್, ಬಿಎಫ್‌ಟಿ ಮಂಜುನಾಥ ಪೂಜಾರ ಸೇರಿದಂತೆ ಇನ್ನಿತರೆ ಸ್ಥಳೀಯ ಪ್ರಮುಖರು ಹಾಗೂ ಕೂಲಿಕಾರರು ಉಪಸ್ಥಿತರಿದ್ದರು.

ಇಂದಿನಿಂದ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಕ್ರಮ

ಬಸವನಬಾಗೇವಾಡಿ: ಪಟ್ಟಣದ ಬಸವ ಭವನದಲ್ಲಿ ಸೆ.13 ರಂದು ಸಂಜೆ 4 ಗಂಟೆಗೆ ವಚನ ಸಾಹಿತ್ಯ ವಿಚಾರ ಸಂಕಿರಣ ಹಾಗೂ ಸೆ.14 ರಂದು ಬೆಳಗ್ಗೆ 11 ಗಂಟೆಗೆ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ 31ನೇ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಜರುಗಲಿದೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ, ಸಾಹಿತಿ ಜಂಬುನಾಥ ಕಂಚ್ಯಾಣಿ ಹಾಗೂ ಪರಿಷತ್ತಿನ ತಾಲೂಕಾಧ್ಯಕ್ಷ ವೀರಣ್ಣ ಮರ್ತುರ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಈ ಕಾರ್ಯಕ್ರಮವನ್ನು ಇದುವರೆಗೂ ರಾಜ್ಯದ ನಾನಾ ಭಾಗಗಳಲ್ಲಿ ಆಯೋಜನೆ ಮಾಡುತ್ತಾ ಬಂದಿದೆ. ಈ ವರ್ಷವು ಬಸವೇಶ್ವರರು ಈ ಪುಣ್ಯಭೂಮಿಯಲ್ಲಿ ಈ ಸಭೆಯನ್ನು ಹಮ್ಮಿಕೊಂಡಿರುವುದು ನಮಗೆಲ್ಲ ಗೌರವದ ವಿಷಯವಾಗಿದೆ. ಎರಡು ದಿನಗಳ ನಡೆಯಲಿರುವ ಕಾರ್ಯಕ್ರಮದ ಎಲ್ಲ ಸಿದ್ಧತೆಗಳನ್ನು ಈಗಾಗಲೇ ಮಾಡಿಕೊಳ್ಳಲಾಗಿದೆ. ಎಂದ ಅವರು, ರಾಜ್ಯದ ವಿವಿಧ ಭಾಗಗಳಿಂದ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಸದಸ್ಯರು ಈ ಸಭೆಯಲ್ಲಿ ಭಾಗವಹಿಸಿರುವ ನಿರೀಕ್ಷೆ ಇದೆ. ಸೆ.13 ರಂದು ಆಗಮಿಸುವ 400 ಕ್ಕೂ ಹೆಚ್ಚು ಸದಸ್ಯರಿಗೆ ಊಟ, ವಸತಿ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಹೇಳಿದರು.

ಸೆ. 13 ರಂದು ಸಂಜೆ ನಾಲ್ಕು ಗಂಟೆಗೆ ಬಸವ ಭವನದಲ್ಲಿ ವಿಶೇಷ ಉಪನ್ಯಾಸವನ್ನು ಹಮ್ಮಿಕೊಳ್ಳಲಾಗಿದೆ. ವಚನ ಸಾಹಿತ್ಯದಲ್ಲಿ ನಡೆ ನುಡಿ ಸಿದ್ಧಾಂತದ ಕುರಿತು ಧಾರವಾಡದ ಡಾ. ಸಂಗಮನಾಥ ಲೋಕಾಪುರ ಉಪನ್ಯಾಸ ನೀಡಲಿದ್ದಾರೆ. ಕಾರ್ಯಕ್ರಮವನ್ನು ನಾಡಿನ ಖ್ಯಾತ ವಿದ್ವಾಂಸ ಡಾ. ಗೊ.ರು. ಚನ್ನಬಸಪ್ಪ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ರಾಜ್ಯ ಸಹಕಾರಿ ಮಹಾಮಂಡಳದ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಸೇರಿದಂತೆ ಅನೇಕ ಸಾಹಿತಿಗಳು ಉಪಸ್ಥಿತರಿರುತ್ತಾರೆ. ನಂತರ ಪರಿಷತ್ತಿನ ರಾಜ್ಯ ಕಾರ್ಯಕಾರಿ ಸಮಿತಿಯ ಸದಸ್ಯರ ಸಭೆ ನಡೆಯಲಿದೆ ಎಂದರು.

ಸೆ.14 ರಂದು ಬೆಳಗ್ಗೆ 10 ಗಂಟೆಯಿಂದ 11 ಗಂಟೆಯವರೆಗೆ ವಚನ ಸಂಗೀತ ಕಾರ್ಯಕ್ರಮ ನಡೆಯಲಿದೆ. ನಂತರ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ 31ನೇ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಪರಿಷತ್ತಿನ ಗೌರವಾಧ್ಯಕ್ಷರಾದ ಸುತ್ತೂರಿನ ಜಗದ್ಗುರು ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಗದಗಿನ ಜಗದ್ಗುರು ಡಾ.ತೋಂಟದ ಸಿದ್ಧರಾಮ ಸ್ವಾಮೀಜಿ ಸಾನಿಧ್ಯದಲ್ಲಿ ಜರುಗಲಿದೆ. ಸಚಿವ ಶಿವಾನಂದ ಪಾಟೀಲ ಉದ್ಘಾಟಿಸುವರು.

ಅಧ್ಯಕ್ಷತೆಯನ್ನು ಪರಿಷತ್ತಿನ ರಾಜ್ಯಾಧ್ಯಕ್ಷ ಡಾ. ಸಿ. ಸೋಮಶೇಖರ್ ವಹಿಸುವರು. ಸ್ಥಳೀಯ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಸೇರಿದಂತೆ ಪರಿಷತ್ತಿನ ವಿವಿಧ ಪದಾಧಿಕಾರಿಗಳು, ಗಣ್ಯರು ಇತರರು ಉಪಸ್ಥಿತರಿರುವರು.

ಡಾ. ಗೊ.ರು. ಚನ್ನಬಸಪ್ಪ ಮಾರ್ಗದರ್ಶನ ನೀಡಲಿದ್ದಾರೆ.

ಇದೇ ಸಂದರ್ಭದಲ್ಲಿ ಜಿಲ್ಲೆಯ ಪರಿಷತ್ತಿನಲ್ಲಿ ಉತ್ತಮ ಕಾರ್ಯ ನಿರ್ವಹಿಸಿದ ಬಸವನಬಾಗೇವಾಡಿ ಘಟಕದ ಅಧ್ಯಕ್ಷ ವೀರಣ್ಣ ಮರ್ತುರ ಹಾಗೂ ಮುದ್ದೇಬಿಹಾಳದ ಕದಳಿ ವೇದಿಕೆ ಅಧ್ಯಕ್ಷೆ ಕಾಶಿಬಾಯಿ ರಾಂಪುರ ಅವರಿಗೆ ಬಸವರಾಜೇಂದ್ರ ಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಗುವುದೆಂದು ಜಂಬುನಾಥ ಕಂಚ್ಯಾಣಿ ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಎಂ.ಜಿ.ಯಾದವಾಡ, ಆರ್.ಜಿ.ಅಳ್ಳಗಿ, ಎಸ್.ಎಸ್. ಝಳಕಿ, ಎಂ.ಜಿ.ಆದಿಗೊಂಡ, ವಿವೇಕಾನಂದ ಕಲ್ಯಾಣಶೆಟ್ಟಿ, ಎಸ್.ಕೆ.ಸೋಮನಕಟ್ಟಿ, ವರೀಶ ಕುಂಟೋಜಿ, ಎಸ್.ಎ.ಎಮನಗೂಳಿ, ಎಸ್.ಎ.ದೇಗಿನಾಳ, ಎಸ್.ಜಿ.ಮೊಕಾಶಿ, ಪ್ರೊ.ಪಿ.ಎಲ್.ಹಿರೇಮಠ ಇದ್ದರು.

ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಬೆಳಗಾವಿ: 2025–26 ನೇ ಸಾಲಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ವಿವಿಧ ಯೋಜನೆಗಳಿಗೆ ಸೇವಾ ಸಿಂಧು ತಂತ್ರಾಂಶದಡಿ (ಪೋರ್ಟಲ್) ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ವೈದ್ಯಕೀಯ ಪರಿಹಾರ ನಿಧಿ, ಶಿಶುಪಾಲನಾ ಭತ್ಯೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ನಿರುದ್ಯೋಗ ಭತ್ಯೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ, ಆಧಾರ ಯೋಜನೆ, ಸಾಧನ ಸಲಕರಣೆಗಳ, ಪುನರ್ವಸತಿ ಕಾರ್ಯಕರ್ತರ ಮರಣ ಪರಿಹಾರ ನಿಧಿ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಹೊಲಿಗೆ ಯಂತ್ರ, ಸಾಧನೆ ಮತ್ತು ಪ್ರತಿಭೆ, ಅಂಧ ವಿದ್ಯಾರ್ಥಿಗಳಿಗೆ ಬ್ರೈಲ್‌ಕಿಟ್, ವಿಕಲಚೇತನರಿಗೆ ಬ್ಯಾಟರಿಚಾಲಿತ ವ್ಹೀಲ್‌ಚೇರ್ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಬೆಳಗಾವಿ ಜಿಲ್ಲೆಯ ವಿಕಲಚೇತನ ವ್ಯಕ್ತಿಗಳು ವೆಬ್‌ಸೈಟ್: https://sevasindhu.karnataka.gov.in/Sevasindhu/Kannada ಮೂಲಕ ಅಗತ್ಯ ದಾಖಲಾತಿಗಳೊಂದಿಗೆ ದಿನಾಂಕ:30–09–2025ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0831–2476096/7 ಗಳಿಗೆ ಸಂಪರ್ಕಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ಹಾರ್ಡ ಪ್ರತಿಯೊಂದಿಗೆ ದ್ವಿ–ಪ್ರತಿಯಲ್ಲಿ ಅರ್ಜಿಯನ್ನು ಆಯಾ ತಾಲೂಕು ಪಂಚಾಯತಿ ಕಛೇರಿಯಲ್ಲಿನ ಎಂ.ಆರ್.ಡಬ್ಲ್ಯೂ. ಗಳಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ

ವನ್ಯಜೀವಿ ಸಂರಕ್ಷಣೆಯಲ್ಲಿ ಅರಣ್ಯ ಸಿಬ್ಬಂದಿಯದ್ದು ನಿಸ್ವಾರ್ಥ ಸೇವೆ

ಕಾರವಾರ: ರಾಜ್ಯದಲ್ಲಿ ಪರಿಸರ, ವನ್ಯಜೀವಿಗಳು ಮತ್ತು ಅರಣ್ಯ ಸಂರಕ್ಷಣೆಯ ಕಾರ್ಯದಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿಗಳು ನಿಸ್ವಾರ್ಥ ಸೇವೆ ಸಲ್ಲಿಸುತ್ತಿದ್ದು, ಮುಂದಿನ ಪೀಳಿಗೆಗೆ ಅರಣ್ಯವನ್ನು ಉಳಿಸುವ ಕಾರ್ಯವನ್ನು ಮಾಡುತ್ತಿದ್ದಾರೆ ಎಂದು ರಾಜ್ಯ ಮಾಹಿತಿ ಆಯೋಗದ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಜಿಲ್ಲಾ ಪಂಚಾಯತ್‌ನ ಆಡಳಿತಾಧಿಕಾರಿ ಸುಷಮಾ ಗೋಡಬೋಲೆ ಹೇಳಿದರು.

ಅವರು ಗುರುವಾರ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿ ಆವರಣದಲ್ಲಿ, ಅರಣ್ಯ ಇಲಾಖೆ ಕೆನರಾ ವೃತ್ತ ಶಿರಸಿ, ಅರಣ್ಯ ವಿಭಾಗ ಕಾರವಾರದ ವತಿಯಿಂದ ನಡೆದ, ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಹುತಾತ್ಮರ ಸ್ಮಾರಕಕ್ಕೆ ಹೂ ಗುಚ್ಛ ಸಲ್ಲಿಸಿ ಮಾತನಾಡಿದರು.

ಉತ್ತರ ಕನ್ನಡ ಜಿಲ್ಲೆಯ ಸಾರ್ವಜನಿಕರಿಗೆ ಅರಣ್ಯದ ಬಗ್ಗೆ ಹೆಚ್ಚಿನ ಅಭಿಮಾನ ಇರುವ ಕಾರಣದಿಂದಲೇ ಇಲ್ಲಿ ಹೆಚ್ಚು ಅರಣ್ಯ ಪ್ರದೇಶ ಇದೆ. ಸಿಬ್ಬಂದಿಗಳ ಕೊರತೆಯ ನಡುವೆಯೂ ಅರಣ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉತ್ತಮವಾಗಿ ಅರಣ್ಯ ಮತ್ತು ವನ್ಯಜೀವಿಗಳನ್ನು ಸಂರಕ್ಷಿಸುತ್ತಿದ್ದಾರೆ. ದೇಶದ ನೈಸರ್ಗಿಕ ಪರಿಸರ ಮತ್ತು ಅರಣ್ಯವನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಸಂವಿಧಾನದಲ್ಲಿ ತಿಳಿಸಲಾಗಿದೆ. ಪರಿಸರ ಹಾನಿ ಮಾಡಿ ಅಭಿವೃದ್ಧಿ ಮಾಡುವುದು ಸಲ್ಲದು. ಅರಣ್ಯ ಮತ್ತು ಪರಿಸರ ಸಂರಕ್ಷಣೆ ಅರಣ್ಯ ಇಲಾಖೆಯ ಜವಾಬ್ದಾರಿ ಮಾತ್ರವಲ್ಲ, ಈ ಬಗ್ಗೆ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಿಗೆ ಹೆಚ್ಚಿನ

ಅರಿವು ಮೂಡಿಸಬೇಕು ಎಂದರು.

ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಮಾತನಾಡಿ, ಜಿಲ್ಲೆಯ ಅರಣ್ಯ ಪ್ರದೇಶವು ಪಕ್ಕದ ಜಿಲ್ಲೆಗಳು ಮತ್ತು ಗೋವಾ ರಾಜ್ಯದೊಂದಿಗೆ ಜೋಡಣೆಯಾಗಿದ್ದು, ಈ ಅರಣ್ಯ ಪ್ರದೇಶದಲ್ಲಿ ಅಕ್ರಮಗಳನ್ನು ತಡೆಯುವುದು ಸವಾಲಿನ ಕಾರ್ಯವಾಗಿದ್ದು, ಈ ಕಾರ್ಯದಲ್ಲಿ ಜಿಲ್ಲೆಯ ಅರಣ್ಯ ಇಲಾಖೆ ಸಿಬ್ಬಂದಿಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅರಣ್ಯ ರಕ್ಷಣೆಯ ಜೊತೆಗೆ ಇಲಾಖೆಯ ಸಿಬ್ಬಂದಿಗಳು ತಮ್ಮ ವೈಯಕ್ತಿಕ ರಕ್ಷಣೆಯ ಕಡೆಗೆ ಗಮನಹರಿಸಬೇಕು. ಅತೀ ಕಡಿಮೆ ಮೊತ್ತದಲ್ಲಿ ದೊರೆಯುವ ವಿಮಾ ಯೋಜನೆಗಳನ್ನು ಪಡೆಯಬೇಕು ಈ ಕುರಿತು ಜಿಲ್ಲಾಡಳಿತದ ಮೂಲಕ ಪ್ರತ್ಯೇಕ ಶಿಬಿರ ಆಯೋಜಿಸಲಾಗುವುದು. ಜಿಲ್ಲಾ ವಿಪತ್ತು ನಿರ್ವಹಣೆಯಲ್ಲಿ ಕಾಡಿನಲ್ಲಿನ ಬೆಂಕಿ ಅವಗಡಗಳನ್ನು ನಿಯಂತ್ರಿಸುವ ಕುರಿತಂತೆ ಪ್ರತ್ಯೇಕ ಎಸ್.ಓ.ಪಿ ರಚಿಸಲಾಗಿದ್ದು, ಕಾಡಿನಲ್ಲಿ ಬೆಂಕಿ ನಿಯಂತ್ರಣಕ್ಕೆ ಜಿಲ್ಲಾಡಳಿತದ ಮೂಲಕ ಇತರೇ ಇಲಾಖೆಗಳ ನೆರವು ಕೂಡಾ ದೊರೆಯಲಿದೆ ಎಂದರು.

ನಾನು ಕರ್ತವ್ಯ ನಿರ್ವಹಿಸಿದ ಜಿಲ್ಲೆಗಳಿಗೆ ಹೋಲಿಸಿದರೆ, ಉತ್ತರ ಕನ್ನಡ ಜಿಲ್ಲೆಯ ಅರಣ್ಯ ಇಲಾಖೆಯ ಸಿಬ್ಬಂದಿಗಳು ನೀಡಿರುವ ಸಹಕಾರ ಅತ್ಯುತ್ತಮವಾಗಿದೆ ಎಂದು ಜಿಲ್ಲಾಧಿಕಾರಿಗಳು ಶ್ಲಾಘಿಸಿದರು. ಸಾರ್ವಜನಿಕರ ಆರೋಗ್ಯ ಉತ್ತಮವಾಗಿರುವಲ್ಲಿ ಅರಣ್ಯ ಮತ್ತು ಪರಿಸರದ ಕೊಡುಗೆ ಅಗತ್ಯವಾಗಿದ್ದು, ಅರಣ್ಯ ಇಲಾಖೆಯ ಮೂಲಕ ಈ ಸೌಲಭ್ಯ ಜಿಲ್ಲೆಯ ಜನತೆಗೆ ದೊರೆಯುತ್ತಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮೂಲಕ ಎಲ್ಲಾ ಸಹಕಾರ ನೀಡಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ಹೇಳಿದರು.

ಕೆನರಾ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಟಿ.ಹೀರಾಲಾಲ್ ಮಾತನಾಡಿ, ದೇಶದ ಗಡಿಯನ್ನು ಸೇನಾಪಡೆ ಮತ್ತು ದೇಶದ ಒಳಗೆ ಪೊಲೀಸ್ ಪಡೆಗಳು ಕಾಪಾಡುತ್ತಿದ್ದು, ದೇಶದೊಳಗಿನ ಅರಣ್ಯ ಸಂಪತ್ತು, ಪರಿಸರ ಮತ್ತು ವನ್ಯಜೀವಿಗಳನ್ನು ಅರಣ್ಯ ಇಲಾಖೆಯ ಸಿಬ್ಬಂದಿಗಳು ಜೀವದ ಹಂಗು ತೊರೆದು ಕಾಪಾಡುತ್ತಿದ್ದಾರೆ. ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇದ್ದರೂ ಕೂಡಾ ಎಲ್ಲಾ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಅತ್ಯಂತ ಸಮರ್ಪಣಾ ಭಾವದಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕರ್ತವ್ಯ ನಿರ್ವಹಣೆಯಲ್ಲಿ ಇದುವರೆಗೆ 62 ಮಂದಿ ಹುತಾತ್ಮರಾಗಿದ್ದು, ಇವರ ತ್ಯಾಗ ಬಲಿದಾನಗಳು ಕರ್ತವ್ಯ ನಿರ್ವಹಣೆಯಲ್ಲಿ ನಮಗೆ ಮತ್ತಷ್ಟು ಪ್ರೇರಣೆಯಾಗಿದೆ ಎಂದರು.

ಕಾರವಾರ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ರವಿಶಂಕರ್ ಸ್ವಾಗತಿಸಿ, ಹುತಾತ್ಮ ಹೆಸರುಗಳನ್ನು ಸ್ಮರಿಸಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ (ಸಾಮಾಜಿಕ ಅರಣ್ಯ) ಮಂಜುನಾಥ ಜಿ ನಾವಿ, ಸಿ.ಆರ್.ಝಡ್ ನ ಪ್ರಾದೇಶಿಕ ನಿರ್ದೇಶಕ ಪ್ರವೀಣ್ ಬಸ್ಸೂರು, ಕಾರವಾರ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕೆ.ಡಿ.ನಾಯಕ, ಅಂಕೋಲ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕೆ.ಸಿ.ಜಯೇಶ ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಹುತಾತ್ಮರ ಸ್ಮಾರಕಕ್ಕೆ ಹೂ ಗುಚ್ಛ ಸಮರ್ಪಣೆ, ಹುತಾತ್ಮರ ಗೌರವಾರ್ಥ ಮೂರು ಸುತ್ತುಗಳ ಗುಂಡು ಹಾರಿಸಿ ಮತ್ತು ಮೌನಾಚರಣೆ ಸಲ್ಲಿಸಲಾಯಿತು.

17ರಂದು ಜಿ.ಪಂ ಕೆಡಿಪಿ ಸಭೆ

ಬಾಗಲಕೋಟೆ: ಜಿಲ್ಲಾ ಪಂಚಾಯತ ಆಡಳಿತಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ 17 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಆಗಸ್ಟ–2025ರ ಮಾಹೆಯ ಮಾಹಿತಿ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭಾಗ್ಯಲಕ್ಷ್ಮೀ ಯೋಜನೆ ಫಲಾನುಭವಿ ಗಮನಕ್ಕೆ

ಬಾಗಲಕೋಟೆ: ಭಾಗ್ಯಲಕ್ಷ್ಮೀ ಯೋಜನೆಯಡಿ 2006–07ನೇ ಸಾಲಿನಲ್ಲಿ ನೋಂದಣಿಯಾಗಿ ಬಾಂಡ ಸೌಲಭ್ಯ ಪಡೆದ ಫಲಾನುಭಗಳು ಸಂಖ್ಯೆ 1462 ಇದ್ದು, ಆನ್‌ಲೈನ್ ಅಳವಡಿಸಿ ಆರ್ಥಿಕ ಸೌಲಭ್ಯ ಪಡೆದವರು 984 ಇದ್ದು, ಅನರ್ಹ ಫಲಾನುಭವಿಗಳ ಸಂಖ್ಯೆ 358 ಇದೆ.

ಆನ್‌ಲೈನ್‌ನಲ್ಲಿ ಅಳವಡಿಸಲು ಬಾಕಿ ಇರುವ ಫಲಾನುಭವಿಗಳ ಸಂಖ್ಯೆ 120 ಇದ್ದು, 2006–07ನೇ ಸಾಲಿನ ಭಾಗ್ಯಲಕ್ಷ್ಮೀ ಯೋಜನೆಯ ಬಾಂಡ ಪಡೆದ ಫಲಾನುಭವಿಗಳಿಗೆ ಪ್ರಧಾನ ಕಚೇರಿಯ ಆದೇಶದನ್ವಯ ಅಕ್ಟೋಬರ 31 ಕೊನೆಯ ದಿನವಾಗಿದೆ. ಸದರಿ ದಿನಾಂಕದ ನಂತರ ಅರ್ಹ ಫಲಾನುಭವಿಗಳು ಆರ್ಥಿಕ ಸೌಲಭ್ಯ ಪಡೆಯಲು ಅವಕಾಶ ವಿರುವುದಿಲ್ಲ.

ಆದ್ದರಿಂದ ಆನ್‌ಲೈನ್ ನೋಂದಣಿಗೆ ಬಾಕಿ ಇರುವ ಫಲಾನುಭವಿಗಳು ಕಚೇರಿ ಅವಧಿಯಲ್ಲಿ ಬಂದು ಭಾಗ್ಯಲಕ್ಷ್ಮೀ ಬಾಂಡಿನಲ್ಲಿ ನಿಗದಿ ಪಡಿಸಿದ ಸೂಕ್ತ ದಾಖಲೆಗಳೊಂದಿಗೆ ಹಾಜರಾಗಿ ಆರ್ಥಿಕ ಸೌಲಭ್ಯ ಪಡೆಯುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಅಂಗನವಾಡಿ ಕೇಂದ್ರ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ದೂಸಂ.08354–295293ಗೆ ಸಂಪರ್ಕಿಸಬಹುದಾಗಿದೆ.

ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮ

ಬಾಗಲಕೋಟೆ: ಪ್ರಸಕ್ತ ಸಾಲಿನ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಸಪ್ಟೆಂಬರ 18 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಅಗ್ನಿಶಾಮಕ ಠಾಣೆ ಕ್ರೀಡಾಂಗಣದಲ್ಲಿ ಹಿರಿಯ ನಾಗರಿಕರಿಗೆ ಜಿಲ್ಲಾ ಮಟ್ಟದ ಕ್ರೀಡೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

60 ರಿಂದ 70 ವರ್ಷದ ಮಹಿಳೆ, ಪುರುಷರಿಗಾಗಿ ಮ್ಯೂಸಿಕಲ್ ಚೇರ್, 60 ರಿಂದ 69, 70 ವರ್ಷ ಮೇಲ್ಪಟ್ಟ ಮಹಿಳೆ ಮತ್ತು ಪುರುಷರಿಗೆ ಬಿರುಸಿನ ನಡಿಗೆ, 70 ವರ್ಷ ಹಾಗೂ ಮೇಲ್ಪಟ್ಟವರಿಗೆ ಬಕೆಟ್‌ನಲ್ಲಿ ಬಾಲ್ ಎಸೆಯುವುದು. ಸಾಂಸ್ಕೃತಿಕ ಸ್ಪರ್ಧೆಗಳಾದ ಗಾಯನ ಸ್ಪರ್ಧೆಗೆ ಏಕ ಪಾತ್ರಾಭಿನಯ 60 ರಿಂದ 70 ವರ್ಷ ಹಾಗೂ ಮೇಲ್ಪಟ್ಟವರಿಗೆ ಹಮ್ಮಿಕೊಳ್ಳಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಎಂ.ಆರ್.ಡಬ್ಲೂಗಳಾದ ಪಾಂಡಪ್ಪ ಲಮಾಣಿ (9538714441), ಮಹಾಂತೇಶ ಪಾಟೀಲ (9945408215), ಸಂಗಪ್ಪ ಬೀರಗೊಂಡರ (8970565869), ಅಶೋಕ ಮುಖವಾಡ (9741197060), ಮಾಗುಂಡಪ್ಪ ಮುದ್ನೂರ (9008173773), ನಿಂಗರಾಜ ಹನಗಂಡಿ (9900417764) ಹಾಗೂ ಶಬ್ಬೀರ ಪಕಾಲಿ (9739936205)ಗೆ ಸಂಪರ್ಕಿಸುವಂತೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಯೋಗಾರಕ್ಕೆ ನೋಂದಣಿ

ಬಾಗಲಕೋಟೆ: ಉದ್ಯಮ ಪೋರ್ಟಲ್ ನೋಂದಾಯಿತ ಮೊದಲ 150 ಎಂ.ಎಸ್.ಎಂ.ಇ ಗಳಿಗೆ ಕೆ.ಎಸ್.ಎಂ.ಸಿ & ಎ ಬೆಂಗಳೂರು ಅವರ ಸಹಯೋಗದಲ್ಲಿ ಝಡ್ಇಡಿ & ಎಲ್ಇಎವಿಎನ್ ವಿಷಯಗಳ ಕುರಿತು ಸೆಪ್ಟೆಂಬರ 24 ರಂದು ಜಮಖಂಡಿ ಪಟ್ಟಣದ ಹೋಟೆಲ್ ಶ್ರೇಯಸ್ ಹಾಗೂ ಸೆಪ್ಟೆಂಬರ 25 ರಂದು ಮುಧೋಳ ಪಟ್ಟಣದ ಹೋಟೆಲ್ ದಿ ಪಾರ್ಕನಲ್ಲಿ ಆಯೋಜಿಸಲಾಗಿದೆ.

ಕೇವಲ 150 ಎಂ.ಎಸ್.ಎಂ.ಇ ಗಳಿಗೆ ಅವಕಾಶವಿರುವುದರಿಂದ ಕೂಡಲೇ ಆಸಕ್ತ ಉದ್ದಿಮೆದಾರರು, http://docs.google.com/forms/d/e/1FAlpQLSeM2kBiDL4vxULi8QmbzD37LOp4Gg3k-ffyeD205ixqqWxZQA/viewform?usp=header ಮೂಲಕ ಸೆಪ್ಟೆಂಬರ 20 ರಂದು ಸಂಜೆ 5 ಗಂಟೆಯೊಳಗಾಗಿ ನೋಂದಾಯಿಸುವಂತೆ ಜಿಲ್ಲಾ ಜಂಟಿ ಕೈಗಾರಿಕಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–200294, 6361385459 ಸಂಪರ್ಕಿಸಬಹುದಾಗಿದೆ.

ಸುಜಾತಾಗೆ ಕ್ರಿಯಾಶೀಲ ಶಿಕ್ಷಕಿ ಪುರಸ್ಕಾರ

ಹುಕ್ಕೇರಿ: ತಾಲೂಕಿನ ಹಂಚಿನಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕಿ ಸುಜಾತಾ ನಾವಿ ಅವರಿಗೆ ಕ್ರಿಯಾಶೀಲ ಶಿಕ್ಷಕಿ ಪ್ರದಾನ ಮಾಡಲಾಯಿತು.

ಪಟ್ಟಣದಲ್ಲಿ ರವಿವಾರ ನಡೆದ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆಯಲ್ಲಿ ವಿವಿಧ ಮಠಾಧೀಶರು, ಇಲಾಖೆ ಹಿರಿಯ ಅಧಿಕಾರಿಗಳು ಮತ್ತು ಗಣ್ಯರು ಸುಜಾತಾ ನಾವಿ ಅವರಿಗೆ ಈ ಪ್ರಶಸ್ತಿ ನೀಡಿ ಗೌರವಿಸಿದರು.

ಪ್ರಭಾರಿ ಮುಖ್ಯ ಶಿಕ್ಷಕಿ ಸುಜಾತಾ ನಾವಿ ಅವರು ಸಲ್ಲಿಸಿರುವ ಅನುಪಮ ಸೇವೆಯನ್ನು ಪರಿಗಣಿಸಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಘಟಕ ಈ ಪುರಸ್ಕಾರ ಕೊಡಮಾಡಿದೆ. ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ವಿರಕ್ತಮಠದ ಶಿವಬಸವ ಸ್ವಾಮೀಜಿ, ಕ್ಯಾರಗುಡ್ಡ ಅವುಜೀಕರ ಧ್ಯಾನ ಯೋಗಾಶ್ರಮದ ಅಭಿನವ ಮಂಜುನಾಥ ಸ್ವಾಮೀಜಿ, ಯುವ ಮುಖಂಡ ಪೃಥ್ವಿ ಕತ್ತಿ, ಪುರಸಭೆ ಅಧ್ಯಕ್ಷ ಇಮ್ರಾನ್ ಮೋಮಿನ್, ಸದಸ್ಯ ಮಹಾವೀರ ನಿಲಜಗಿ, ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಅವಿನಾಶ ಹೊಳೆಪ್ಪಗೋಳ, ಬಿಇಒ ಪ್ರಭಾವತಿ ಪಾಟೀಲ, ಬಿಆರ್‌ಸಿ ಎ.ಎಸ್.ಪದ್ಮಣ್ಣವರ, ಬಿಸಿಯೂಟ ಯೋಜನೆ ಸಹಾಯಕಿ ನಿರ್ದೇಶಕಿ ಸವಿತಾ ಹಲಕಿ ಮತ್ತಿತರರು ಉಪಸ್ಥಿತರಿದ್ದರು.

ಹೆಚ್‌ಐವಿ ಮುಕ್ತ ವಿಜಯಪುರ ಜಿಲ್ಲೆ
ಬೈಕ್ ರ‍್ಯಾಲಿ ಮೂಲಕ ಜಾಗೃತಿ

ವಿಜಯಪುರ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಲ್ಯಾಣ, ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ ವಿಜಯಪುರ ಇವರ ಸಹಯೋಗದಲ್ಲಿ ಹೆಚ್‌ಐವಿ ಮುಕ್ತ ಜಿಲ್ಲೆಯನ್ನಾಗಿಸಲು ಜಾಗೃತಿಗಾಗಿ ಸೆ.12ರಂದು ಬ್ಯಾಕ್ ರ‍್ಯಾಲಿ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಯಿತು.

ಬೈಕ್ ರ‍್ಯಾಲಿ ಜಾಗೃತಿ ಜಾಥಾಕ್ಕೆ ಆರೋಗ್ಯ ಇಲಾಖೆ ಅಪ್ ನಿರ್ದೇಶಕರಾದ ಡಾ.ಚೆನ್ನಮ್ಮಾ ಕಟ್ಟಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸಂಪತ್ ಗುಣಾರಿ ಮತ್ತು ಜಿಲ್ಲಾ ಏಡ್ಸ್ ಮತ್ತು ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ.ಮಲ್ಲನಗೌಡ ಬಿರಾದಾರ ಚಾಲನೆ ನೀಡಿದರು.

ಬೈಕ್ ರ‍್ಯಾಲಿಯಲ್ಲಿ 100ಕ್ಕೂ ಹೆಚ್ಚು ದ್ವಿಚಕ್ರ ವಾಹನಗಳು ಭಾಗವಹಿಸಿದ್ದು, ಜಿಲ್ಲಾ ಆಸ್ಪತ್ರೆ ಆವರಣದ ಜಿಲ್ಲಾ ಏಡ್ಸ್ ನಿಯಂತ್ರಣ ಕಚೇರಿಯಿಂದ ಆರಂಭಗೊಂಡ ರ‍್ಯಾಲಿ ನಗರದ ರಹಿಂ ನಗರ, ಇಬ್ರಾಹಿಂರೋಜಾ, ಬಬಲೇಶ್ವರ ನಾಕಾ, ಮೀನಾಕ್ಷಿ ಚೌಕ್, ಕೇಂದ್ರ ಬಸ್ ನಿಲ್ದಾಣ, ಕಣಕಿ ಬಜಾರ ಮಾರ್ಗವಾಗಿ ಜುಮ್ಮಾ ಮಸೀದ ರಸ್ತೆ, ಹಕೀಮ ಚೌಕ್, ಗೋಲಗುಂಬಜ್‌ದಿಂದ ಗಾಂಧಿಚೌಕ್, ಶಿವಾಜಿ ಸರ್ಕಲ್, ವಾಟರ್ ಟ್ಯಾಂಕ್ ಮಾರ್ಗವಾಗಿ ಜಿಲ್ಲಾ ಆಸ್ಪತ್ರೆವರೆಗೆ ಸಾಗಿತು. ಬೈಕ್ ರ‍್ಯಾಲಿಯಲ್ಲಿ ಬಿಎಲ್‌ಡಿಇ ಸಂಸ್ಥೆಯ ಎ.ಎಸ್.ಪಾಟೀಲ ಕಾಲೇಜಿನ ವಿದ್ಯಾರ್ಥಿಗಳು, ಐಸಿಟಿಸಿ, ಎ.ಆರ್.ಟಿ., ಡಿ.ಎಸ್.ಆರ್.ಸಿ., ಎನ್‌ಟಿಇಪಿ ಮತ್ತು ಸರ್ಕಾರೇತರ ಸಂಘ–ಸಂಸ್ಥೆಗಳ ಸಿಬ್ಬಂದಿಗಳು ಭಾಗವಹಿಸಿದ್ದರು.

ಬನಹಟ್ಟಿಯ ವಿಠ್ಠಲ ಮಂದಿರ ಓಣಿಯ ರುಕ್ಮಿಣಿ ಮಹಿಳಾ ಮಂಡಳದ ಸದಸ್ಯರು ಶುಕ್ರವಾರ ಬನಹಟ್ಟಿಯ ಶ್ರೀ ಕಾಡಸಿದ್ದೇಶ್ವರ ಜಾತ್ರೆಯ ಅಂಗವಾಗಿ ರೊಟ್ಟಿಗಳನ್ನು ತಲೆಯ ಮೇಲೆ ಹೊತ್ತು ದೇವಸ್ಥಾನಕ್ಕೆ ಮುಟ್ಟಿಸಿದರು.

ಡ್ರಗ್ಸ್ ಮಿಶ್ರಿತ ಮಾವ ಮಾರಾಟ ತಡೆಗಟ್ಟಲು ಬೃಹತ ಜನಾಂದೋಲನ

ಜಮಖಂಡಿ: ಸೆಪ್ಟೆಂಬರ್ 12:ನಗರದಲ್ಲಿ ಡ್ರಗ್ಸ್ ಹಾಗೂ ತಂಬಾಕು ಮಿಶ್ರಿತ ಮಾವದ ದಂಧೆ ವಿರುದ್ಧ ಬೃಹತ್ ಜನಾಂದೋಲನವನ್ನು ಮಠಾಧೀಶರುಗಳ ನೇತೃತ್ವದಲ್ಲಿ ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಡೆಸಿ ಮಾವ ಮಾರಾಟವನ್ನು ತಕ್ಷಣವೇ ಸಂಪೂರ್ಣವಾಗಿ ನಿಲ್ಲಿಸಬೇಕು ಎಂದು ಒತ್ತಾಯಿಸಿ ತಹಸೀಲ್ದಾರ 2 ಗ್ರೇಡ ಅವರ ಮೂಲಕ ಮನವಿ ಸಲ್ಲಿಸಿದರು ಸಂದರ್ಭದಲ್ಲಿ ಭೀಮ ಆರ್ಮಿ ಜಿಲ್ಲಾಧ್ಯಕ್ಷ ರಮೇಶ ಬಳೋಲಗಿಡದ ಮಾತನಾಡಿ, ನಗರದಲ್ಲಿ ಡ್ರಗ್ಸ್, ಗಾಂಜಾ ಹಾಗೂ ತಂಬಾಕು ಮಿಶ್ರಿತ ಮಾವದ ದಂಧೆ ರಾಜಾರೋಷವಾಗಿ ಸಾಗುತ್ತಿದ್ದು, ಇದರಿಂದ ಚಿಂತಾಜನಕ ವಾತಾವರಣ ನಿರ್ಮಾಣವಾಗಿದೆ. ಹಲವಾರು ಬಾರಿ ನಾಗರಿಕರು ಇಲಾಖೆಗೆ ಮನವಿ ಸಲ್ಲಿಸಿದರೂ ಶಾಶ್ವತ ಪರಿಹಾರ ದೊರೆತಿಲ್ಲ. ಅಧಿಕಾರಿಗಳು ತಾತ್ಕಾಲಿಕ ಕ್ರಮ ಕೈಗೊಂಡರೂ, ಕೆಲವು ದಿನಗಳಲ್ಲಿ ಮತ್ತೆ ಮಾರಾಟ ಪ್ರಾರಂಭವಾಗುತ್ತಿದೆ. ಕಾನೂನುಬಾಹಿರವಾಗಿ ನಡೆಯುತ್ತಿರುವ ಈ ದಂಧೆಯಿಂದ ಸಮಾಜದಲ್ಲಿ ಅನೇಕ ದುಷ್ಪರಿಣಾಮಗಳು ಗೋಚರಿಸುತ್ತಿವೆ ಎಂದರು. ಅತಿಯಾದ ಮಾವ ಸೇವನೆಯಿಂದ ನಾಗರಿಕರು ದೈಹಿಕವಾಗಿ ಕುಗ್ಗುತ್ತಿದ್ದಾರೆ ಎಂದರು

ಪ್ರತಿಭಟನೆಯಲ್ಲಿ ಓಲೇಮಠದ ಆನಂದ ದೇವರು ರುದ್ರಾವಧೂತ ಮಠದ ಕೃಷ್ಣಾನಂದ ಅವದೂತ ಪ್ರೇಮ ಬಳೋಲಗಿಡದ ಅರುಣ ಲಗಳಿ ಸುರೇಶ ನಡುವಿನಮನಿ ಪ್ರದೀಪ ಮೆಟಗುಡ್ಡ ರಾಜು ನದಾಫ ಮಂಜು ಭೋವಿ ಮುಂತಾದವರು ಭಾಗವಹಿಸಿದ್ದರು

ವಿಶ್ವ ಸ